ಸಂಪುಟ : 8 ಸಂಚಿಕೆ 309 ಪುಟ : 4 ಬೆಲೆ : 3.00 ರವಿವಾರ ಜನೆವರಿ 21, 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್


# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 8 Issue : 309 Pages : 4 Price : 3.00 Sunday JANUARY 21, 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




## ಸಚಿವ ಎಚ್.ಕೆ.ಪಾಟೀಲ ಅವರ ಪ್ರವಾಸ



■ ವಿಜಯಸಾಕ್ಷಿ ಸುದ್ದಿ, ಗದಗ

ಕಾನೂನು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವರ ಜ. 21 ರ ಪ್ರವಾಸದ ವಿವರ ಇಂತಿದೆ.

ಸಚಿವರು ಬೆಳಗ್ಗೆ 9.30ಗಂಟೆಗೆ ನಗರದ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿರುವ ಕಾಂಗ್ರೆಸ್ ಕಾರ್ಯಾಲಯದಲ್ಲಿ ಎ.ಐ.ಸಿ.ಸಿ. ಕಾರ್ಯದರ್ಶಿಗಳೊಂದಿಗೆ ಸಭೆ ನಡೆಸುವರು. ಮಧ್ಯಾಹ್ನ 12 ಗಂಟೆಗೆ ಸಂಭಾಪೂರ ರಸ್ತೆಯ ಹವಾಮಾನ ಇಲಾಖೆ ಪಕ್ಕದಲ್ಲಿ ನಿಜಶರಣ ಅಂಬಿಗರ ಚೌಡಯ್ಯ ಜಯಂತ್ಯುತ್ಸವ ಹಾಗೂ ಟ್ರಸ್ಟಿನ ಕಾರ್ಯಾಲಯದ ಉದ್ಘಾಟನೆಯಲ್ಲಿ ಪಾಲ್ಗೊಳ್ಳುವರು.

ಮಧ್ಯಾಹ್ನ 12.30 ಗಂಟೆಗೆ ಹಳೆ ವಕಾರ ಸಾಲಿನಲ್ಲಿನ ಬಿ.ಜಿ.ಅಣ್ಣಿಗೇರಿ ಆಶ್ರಮದಲ್ಲಿ ಆಶ್ರಮದ ಅಭಿವೃದ್ಧಿ ಕುರಿತು ಸಭೆ ನಡೆಸುವರು. ಸಂಜೆ 5 ಗಂಟೆಗೆ ಶ್ರೀ. ಸಿ.ಡಿ.ಓ. ಜೈನ ಶಾಲೆಯಲ್ಲಿ ಪ್ಲೇ ಗಾರ್ಡನ್ ಉದ್ಘಾಟನೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ರಸ್ತೆ ಮೂಲಕ ಹುಬ್ಬಳ್ಳಿಗೆ ತೆರಳಿ, ಹುಬ್ಬಳ್ಳಿಯಿಂದ ರಾತ್ರಿ 9 ಗಂಟೆಗೆ ಬೆಂಗಳೂರಿಗೆ ಪ್ರಯಾಣ ಬೆಳೆಸುವರು.

## ನೀರು ಪೂರೈಕೆಯಲ್ಲಿ ವ್ಯತ್ಯಯ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆಯ ಸಗಟು ನೀರು ಸರಬರಾಜು ಮಾಡುವ ಪಾಪನಾಶಿಯ ಸಿಂಗಟರಾಯನ ಕೆರೆಯ ನೀರು ಶುದ್ಧೀಕರಣ ಘಟಕದಿಂದ ಗದಗ 'ಎ' ಪಾಯಿಂಟನ ಹಲವು ಭಾಗಗಳ ನೀರು ಪೂರೈಕೆಯ ಮುಖ್ಯ ಕೊಳವೆ ಮಾರ್ಗಗಳಲ್ಲಿ ದುರಸ್ತಿ ಇರುವುದರಿಂದ ದಿ. 21.01.2024 ರಂದು ನೀರು ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದ್ದು, ಸಾರ್ವಜನಿಕರು ನಗರಸಭೆಯೊಂದಿಗೆ ಸಹಕರಿಸುವಂತೆ ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

## 8ನೇ ತರಗತಿ ಪ್ರವೇಶಕ್ಕೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಬೆಳಗಾವಿ ಜಿಲ್ಲೆ ಖಾನಾಪುರ ತಾಲೂಕಿನ ನಂದಗಡದಲ್ಲಿನ ಸಂಗೊಳ್ಳಿ ರಾಯಣ್ಣ ಸ್ಮಾರಕ ಸನಿವಾಸ ಶಾಲೆಯಲ್ಲಿ 2024-25ನೇ ಸಾಲಿಗೆ 8ನೇ ತರಗತಿ ಇಂಗ್ಲೀಷ ಮಾಧ್ಯಮದ ವಿಭಾಗ-ಕ್ಕೆ ವಿದ್ಯಾರ್ಥಿಗಳನ್ನು ಪ್ರವೇಶ ಪರೀಕ್ಷೆ ಮೂಲಕ ಆಯ್ಕೆ ಮಾಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಬೆಳಗಾವಿ ವಿಭಾಗದ ಧಾರವಾಡ, ಬೆಳಗಾವಿ, ವಿಜಯಪುರ, ಬಾಗಲಕೋಟೆ, ಗದಗ, ಹಾವೇರಿ, ಕಾರವಾರ ಜಿಲ್ಲೆಗಳಲ್ಲಿ ಒದುತ್ತಿರುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಿದ್ದು, ಅರ್ಜಿಗಳನ್ನು 05-02-2024ರೊಳಗಾಗಿ ಸಲ್ಲಿಸಬಹುದಾಗಿದೆ.

ಅರ್ಜಿಗಳನ್ನು ಃಣಣಠಿ://ಡಿಟಥಿಟಿಜರ ತಿಜಜಛಟಥಿ.ಛಿಂಟ ರಾಯಣ್ಣ ಸ್ಮಾರಕ ಸನಿವಾಸ ಶಾಲೆ ವೆಬ್‌ಸೈಟ್ ಮೂಲಕ ಡೌನಲೋಡ್ ಮಾಡಿಕೊಳ್ಳಬಹುದಾಗಿದೆ.

ಭರ್ತಿ ಮಾಡಿದ ಅರ್ಜಿ ನಮೂನೆಯ ಜೊತೆಗೆ ಪ್ರವೇಶ ಪತ್ರ ರವಾನೆಗಾಗಿ 5/-ರೂ.ಮೌಲ್ಯದ ಸ್ವಯಂ ವಿಳಾಸವುಳ್ಳ ಎರಡು ಅಂಚೆ ಲಕೋಟೆಯನ್ನು ಅರ್ಜಿದಾರರು ಕಡ್ಡಾಯವಾಗಿ ಲಗತ್ತಿಸಿ "ಪ್ರಾಂಶುಪಾಲರು, ಸಂಗೊಳ್ಳಿ ರಾಯಣ್ಣ ಸ್ಮಾರಕ ಸನಿವಾಸ ಶಾಲೆ ನಂದಗಡ, ತಾ. ಖಾನಾಪುರ, ಜಿ:ಬೆಳಗಾವಿ-591120"ಗೆ ಅಂಚೆ ಮೂಲಕ ಸಲ್ಲಿಸುವದು.

ಪ್ರಸಕ್ತ ಸಾಲಿನಲ್ಲಿ 7ನೇ ತರಗತಿಯಲ್ಲಿ ಓದುತ್ತಿರುವ ವಿದ್ಯಾರ್ಥಿಗಳು ಅರ್ಜಿಯನ್ನು ಸಲ್ಲಿಸಬಹುದಾಗಿದೆ. ಈ ಸಂಬಂಧ 50 ಸೀಟುಗಳು, ಲಭ್ಯವಿದ್ದು, ಇದರಲ್ಲಿ ಶೇ. 50ರಷ್ಟು ಸಾಮಾನ್ಯ ವರ್ಗದವರಿಗೆ, ಉಳಿದ ಶೇ.50 ರಲ್ಲಿ ಶೇ. 25ರಷ್ಟು ಹಿಂದುಳಿದ ವರ್ಗಗಳ ಹಾಗೂ ಅಲ್ಪಸಂಖ್ಯಾತರಿಗೆ ಇನ್ನುಳಿದ ಶೇ.25ರಷ್ಟು ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದವರಿಗೆ ಮೀಸಲಿರಿಸಲಾಗಿದೆ. ಈ ಎಲ್ಲ ವರ್ಗಗಳಲ್ಲಿ ಶೇ. 50 ರಷ್ಟು ಬಾಲಕಿಯರಿಗೆ ಮೀಸಲಿರಸಲಾಗಿದೆ. ಆಯ್ಕೆಯಾದ ವಿದ್ಯಾರ್ಥಿಗಳಿಗೆ ಉಚಿತ ಊಟ, ವಸತಿ ಹಾಗೂ ಶಿಕ್ಷಣ ನೀಡಲಾಗುವದು ಎಂದು ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಪ್ರಕಟಣೆಯಲ್ಲಿ ತಿಳಿಸಿದೆ.

### ಸಚಿವ ಎಚ್.ಕೆ. ಪಾಟೀಲರಿಂದ ಪ್ರಗತಿ ಪರಿಶೀಲನೆ | ಬಾಕಿ ಇರುವ ಅಹವಾಲುಗಳನ್ನು ಪರಿಹರಿಸಲು ಸೂಚನೆ

# 'ಜನತಾ ದರ್ಶನ' ಕಾಟಾಚಾರಕ್ಕಾಗದಿರಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಕಳೆದ ಸೆಪ್ಟೆಂಬರ್ 30ರಂದು ಜರುಗಿದ ಜಿಲ್ಲಾ ಮಟ್ಟದ ಜನತಾ ದರ್ಶನ ಕಾರ್ಯಕ್ರಮದಲ್ಲಿ ಒಟ್ಟು 921 ಅಹವಾಲುಗಳ ಸ್ವೀಕೃತವಾಗಿದ್ದವು. ಈ ಪೈಕಿ ಶೇ. 82.4ರಷ್ಟು ಅಹವಾಲುಗಳನ್ನು ವಿಲೇ ಮಾಡುವ ಮೂಲಕ ಪ್ರಗತಿ ಸಾಧನೆಯಾಗಿದೆ. ಬಾಕಿ ಇರುವ 162 ಅಹವಾಲುಗಳಿಗೆ ಶೀಘ್ರವೇ ಪರಿಹಾರ ಒದಗಿಸಿ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ ಜರುಗಿದ ಜನತಾ ದರ್ಶನ ಹಾಗೂ ಪಂಚ ಗ್ಯಾರಂಟಿಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಇಲಾಖಾವಾರು ಜನತಾದರ್ಶನದಲ್ಲಿ ಸ್ವೀಕೃತವಾದ ಅಹವಾಲುಗಳ ಕುರಿತಂತೆ ಅಧಿಕಾರಿಗಳಿಂದ ಮಾಹಿತಿ ಪಡೆದ ಸಚಿವರು, ಸಾರ್ವಜನಿಕರಿಗೆ ಸರ್ಕಾರದಿಂದ ಸಹಾಯಧನ, ಸೌಲಭ್ಯಗಳು ಸಮರ್ಪಕವಾಗಿ ತಲುಪಬೇಕು. ಜನತಾ ದರ್ಶನ ಕಾರ್ಯಕ್ರಮದ ಮೂಲಕ ಜನಸಾಮಾನ್ಯರಿಗೆ ಸರಕಾರಿ ಸೇವೆಗಳು ಕಾಲಮಿತಿಯೊಳಗೆ ದೊರಕುವಂತಾಗಬೇಕು. ಬಾಕಿ ಇರುವ ಅಹವಾಲುಗಳ ಪರಿಹಾರಕ್ಕೆ ಜಿಲ್ಲಾ ಮಟ್ಟದಲ್ಲಿ ಸಾಧ್ಯವಾಗದಿದ್ದಲ್ಲಿ ರಾಜ್ಯ ಮಟ್ಟದ ಇಲಾಖಾ ಮುಖ್ಯಸ್ಥರಿಗೆ ಅಗತ್ಯದ ಪ್ರಸ್ತಾವನೆಗಳನ್ನು ಸಲ್ಲಿಸಿ ಅದರ ಪ್ರತಿಯನ್ನು ಜಿಲ್ಲಾಧಿಕಾರಿಗಳಿಗೆ ನೀಡಬೇಕು ಎಂದರು.

ಶೀಘ್ರದಲ್ಲಿಯೇ ಜಿಲ್ಲಾ ಮಟ್ಟದ ಜನತಾದರ್ಶನ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತಿದ್ದು, ಅದರೊಳಗಾಗಿಯೇ ಕಳೆದ ಬಾರಿಯ ಜನತಾದರ್ಶನದಲ್ಲಿ ಸ್ವೀಕೃತವಾದ ಅಹವಾಲುಗಳ



ಪೈಕಿ ಬಾಕಿ ಇರುವ ಅಹವಾಲುಗಳಿಗೆ ಪರಿಹಾರ ಕಂಡುಕೊಳ್ಳಲು ತಿಳಿಸಿದರು.

ಪಂಚ ಗ್ಯಾರಂಟಿಗಳ ಕುರಿತು ವರದಿ ನೀಡುವ ಅಧಿಕಾರಿಗಳು ತಾವು ನೀಡುವ ಅಂಕಿ-ಅಂಶಗಳು ವಾಸ್ತವಕ್ಕೆ ಸರಿಯಾಗಿರಬೇಕು. ತಾಂತ್ರಿಕ ಸಮಸ್ಯೆಗಳಿರುವ ಅರ್ಜಿಗಳಿಗೆ ಪರಿಹಾರ ನೀಡಲು ಅಗತ್ಯದ ಕ್ರಮಗಳನ್ನು ವಹಿಸಬೇಕು ಎಂದರು.

ಗೃಹಲಕ್ಷ್ಮೀ ಯೋಜನೆಯಡಿ 475 ಫಲಾನುಭವಿಗಳಿಗೆ ಮಂಜೂರಾತಿ ನೀಡುವದು ಬಾಕಿ ಇದ್ದು, ಈ ಪೈಕಿ 384 ಫಲಾನುಭವಿಗಳು ಆದಾಯ ತೆರಿಗೆ ಸಲ್ಲಿಸುವವರಾಗಿರುತ್ತಾರೆ ಹಾಗೂ 38 ಫಲಾನುಭವಿಗಳು ಮೃತರಾಗಿರುತ್ತಾರೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರು ಮಾಹಿತಿ ಒದಗಿಸಿದರು.

ಶಕ್ತಿ ಯೋಜನೆಯಡಿ ಜಿಲ್ಲೆಯಲ್ಲಿ ಪ್ರತಿದಿನ 1.41 ಲಕ್ಷ ಮಹಿಳಾ ಪ್ರಯಾಣಿಕರು ಪ್ರಯಾಣಿಸುತ್ತಿದ್ದಾರೆ. ಯೋಜನೆ ಆರಂಭದಿಂದ ಜನೇವರಿ 17ರವರೆಗೆ 100 ಕೋಟಿಗೂ ಅಧಿಕ ಪ್ರಯಾಣಿಕರು ಶಕ್ತಿ ಯೋಜನೆ ಪ್ರಯೋಜನೆ ಪಡೆದಿದ್ದಾರೆ. 43.30 ಲಕ್ಷ ಸರಾಸರಿ ಪ್ರತಿದಿನದ ಆದಾಯವಾಗಿದೆ ಎಂದು ಗದಗ ವಿಭಾಗೀಯ ಸಾರಿಗೆ ನಿಯಂತ್ರಕರು ತಿಳಿಸಿದರು. ಗೃಹಜ್ಯೋತಿ ಯೋಜನೆಯಡಿ ಜಿಲ್ಲೆಯಲ್ಲಿ ಶೇ. 97.36 ಫಲಾನುಭವಿಗಳು ನೋಂದಣಿ ಮಾಡಿಸಿದ್ದಾರೆ. 4689 ಫಲಾನುಭವಿಗಳ ನೋಂದಣಿ ಬಾಕಿಯಿದೆ. ಯುವನಿಧಿಯಡಿ 6115 ಅರ್ಹರಿದ್ದು ನೋಂದಣಿ ಕಾರ್ಯ ಆರಂಭವಾಗಿದೆ ಎಂದರು.

ಇದಕ್ಕೆ ಪ್ರತಿಯಾಗಿ ಮಾತನಾಡಿದ ಸಚಿವ ಎಚ್.ಕೆ. ಪಾಟೀಲ, ಗ್ಯಾರಂಟಿ ಯೋಜನೆಗಳು ಶೇ. 100ರಷ್ಟು ಪ್ರಗತಿಯಾಗಬೇಕು. ಪ್ರಗತಿಯಾಗದೇ ಇರುವದಕ್ಕೆ ಕಾರಣವೇನು, ಹಾಗೂ ಶೇ. 100ರಷ್ಟು ಪ್ರಗತಿ ಹೊಂದಲು ಏನು ಕ್ರಮ ವಹಿಸಿಬೇಕೆಂಬುದರ ಬಗ್ಗೆ ಸಂಬಂಧಿತ ಇಲಾಖಾಧಿಕಾರಿಗಳು ಗಮನ ಹರಿಸಬೇಕು ಎಂದರು.

ಸಭೆಯಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ, ಉಪವಿಭಾಗಾಧಿಕಾರಿ ಡಾ.ವೆಂಕಟೇಶ ನಾಯ್ಕ, ಜಿಲ್ಲಾ ಪಂಚಾಯತ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಜಿಮ್ಸ್ ನಿರ್ದೇಶಕ ಡಾ.ಬಸವರಾಜ ಬೊಮ್ಮನಹಳ್ಳಿ ಸೇರಿದಂತೆ ಜಿಲ್ಲಾ ಮಟ್ಟದ ಎಲ್ಲ ಅಧಿಕಾರಿಗಳು ಹಾಜರಿದ್ದರು.

> ಜನತಾ ದರ್ಶನ ಕಾರ್ಯಕ್ರಮವು ಕಾಟಾಚಾರದ ಕಾರ್ಯಕ್ರಮವಾಗದೇ ಜನರ ಸಮಸ್ಯೆಗೆ ಪರಿಹಾರ ನೀಡುವ ವೇದಿಕೆಯಾಗಬೇಕು. ಸರಕಾರಿ ಸೌಲಭ್ಯಗಳು ಸುಲಭವಾಗಿ ಅರ್ಹರಿಗೆ ತಲುಪಬೇಕು. ಈ ನಿಟ್ಟಿನಲ್ಲಿ ಎಲ್ಲ ಅಧಿಕಾರಿ, ಸಿಬ್ಬಂದಿಗಳು ಕಾರ್ಯ ನಿರ್ವಹಿಸಬೇಕು. ಈ ಕಾರ್ಯದಲ್ಲಿ ಯಾವುದೇ ರೀತಿಯ ಉದಾಸೀನ ಮನೋಭಾವ ಸಹಿಸಲಾಗದು.
>
> **- ಎಚ್.ಕೆ. ಪಾಟೀಲ.**
> ಜಿಲ್ಲಾ ಉಸ್ತುವಾರಿ ಸಚಿವರು.

> ಇದಕ್ಕೂ ಮುನ್ನ ಸರ್ಕಾರದ ಮಹತ್ವಾಕಾಂಕ್ಷಿ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನೆ ನಡೆಸಿದ ಸಚಿವರು, ಪಂಚ ಗ್ಯಾರಂಟಿ ಯೋಜನೆಗಳು ಜಿಲ್ಲೆಯಲ್ಲಿ ಪ್ರತಿ ಅರ್ಹರಿಗೂ ತಲುಪಲೇಬೇಕು. ಶೇ. 100ರಷ್ಟು ಗುರಿ ಸಾಧನೆಯನ್ನು ಅಧಿಕಾರಿ ವರ್ಗ ನಿರ್ವಹಿಸಬೇಕು. ಈ ನಿಟ್ಟಿನಲ್ಲಿ ಸರ್ಕಾರದ ಪಂಚ ಗ್ಯಾರಂಟಿಗಳ ಸೌಲಭ್ಯ ಅರ್ಹ ಪ್ರತಿಯೊಬ್ಬರಿಗೂ ಸುಲಭವಾಗಿ ದೊರಕಬೇಕು ಎಂದರು.

### ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದ ಶ್ರೀರಾಮ ಸೇನೆಯ ರಾಜು ಖಾನಪ್ಪನವರ

# ಗದುಗಿನಲ್ಲಿ ಶ್ರೀರಾಮ ಮೂರ್ತಿಯ ಭವ್ಯ ಮೆರವಣಿಗೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸಿಎಂ ಸಿದ್ದರಾಮಯ್ಯ ನಾಡಿನಾದ್ಯಂತ ಶ್ರೀರಾಮೋತ್ಸವ ತಡೆಯುವ ಕೆಲಸ ಮಾಡುತ್ತಿದ್ದಾರೆ. ವಿಶೇಷವಾಗಿ ಸಚಿವ ಪ್ರಿಯಾಂಕ್ ಖರ್ಗೆ ತಮ್ಮ ನಾಲಿಗೆ ಹರಿಬಿಡುತ್ತಿದ್ದಾರೆ. ರಾಮಮಂದಿರ ಪರ ಸುಪ್ರಿಂಕೋರ್ಟ್ ತೀರ್ಪು ಬಂದರೂ ಇಲ್ಲಸಲ್ಲದ ಹೇಳಿಕೆ ನೀಡುತ್ತಿದ್ದಾರೆ. ಅಂಬೇಡ್ಕರರ ಸಂವಿಧಾನದ ಅಡಿಯಲ್ಲಿಯೇ ಶ್ರೀರಾಮ ಮಂದಿರ ಹೋರಾಟಕ್ಕೆ ಜಯ ಸಿಕ್ಕಿದೆ. ಆದರೂ ಶ್ರೀರಾಮ, ಹಿಂದೂಗಳನ್ನು ಟೀಕೆ ಮಾಡಿದರೆ ಅದು ಅಂಬೇಡ್ಕರ್ ಅವರಿಗೆ ಅವಮಾನ ಮಾಡಿದಂತೆ ಎಂದು ಶ್ರೀರಾಮ ಸೇನೆ ರಾಜ್ಯ ಪ್ರಧಾನ ಕಾರ್ಯದರ್ಶಿ ರಾಜು ಖಾನಪ್ಪನವರ ಆರೋಪಿಸಿದರು.

ಶನಿವಾರ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಅಯೋಧ್ಯೆ ಶ್ರೀರಾಮ ಮಂದಿರ ಪ್ರಾಣ ಪ್ರತಿಷ್ಠಾಪನೆಯ



ದಿನದಂದು ಗದಗ-ಬೆಟಗೇರಿ ಅವಳಿ ನಗರದಲ್ಲಿ 8 ಅಡಿ ಎತ್ತರದ ಶ್ರೀರಾಮ ಮೂರ್ತಿಯ ಭವ್ಯ ಮೆರವಣಿಗೆಯನ್ನು ಆಯೋಜಿಸಲಾಗಿದೆ. ಆದರೆ, ರಾಜ್ಯ ಸರಕಾರ ಪೊಲೀಸರನ್ನು ಬಳಸಿಕೊಂಡು, ಮೆರವಣಿಗೆಯನ್ನು ತಡೆಹಿಡಿಯುವ ಕೆಲಸ ಮಾಡುತ್ತಿದೆ. ಸರಕಾರ ಯಾವುದೇ ರೀತಿಯ ಒತ್ತಡ ಹಾಕಲಿ, ಪೊಲೀಸ್ ಇಲಾಖೆ ಸಂಪೂರ್ಣ ಬಲ ಪ್ರಯೋಗ ಮಾಡಿದರೂ ಅಂದು ಬೆಳಿಗ್ಗೆ 10.30ಕ್ಕೆ ಜೋಡ ಮಾರುತಿ ದೇವಸ್ಥಾನದಿಂದ ಕೆ.ಸಿ. ರಾಣಿ ರಸ್ತೆಯಲ್ಲಿರುವ ರಾಮ ಮಂದಿರದವರೆಗೆ ಮೆರವಣಿಗೆ ತಡೆಯಲು ಸಾಧ್ಯವಿಲ್ಲ ಎಂದು ಸ್ಪಷ್ಟಪಡಿಸಿದರು.

> ಜ. 22ರ ಕಾರ್ಯಕ್ರಮದ ಕುರಿತಾಗಿ ಜನವರಿ 18ರಂದು ಪೊಲೀಸ್ ಇಲಾಖೆಗೆ ಮಾಹಿತಿ ನೀಡಿದ್ದೇವೆ. ಆದರೆ ಪೊಲೀಸರು ಶುಕ್ರವಾರ ಸಂಘಟನೆಯ ಪ್ರಮುಖರನ್ನು ಕರೆದು ಮೆರವಣಿಗೆ ಬಿಟ್ಟು, ಕೇವಲ ದೇವಸ್ಥಾನದಲ್ಲಿ ಕಾರ್ಯಕ್ರಮ ಮಾಡುವಂತೆ ಸೂಚಿಸಿದ್ದಾರೆ. ಯಾವುದೇ ಕಾರಣಕ್ಕೂ ಮೆರವಣಿಗೆ ರದ್ದು ಮಾಡುವುದಿಲ್ಲ. ಪೂರ್ವ ನಿರ್ಧಾರದಂತೆ ಕಾರ್ಯಕ್ರಮ ನಡೆಯಲಿದೆ ಎಂದು ರಾಜು ಖಾನಪ್ಪನವರ ಸ್ಪಷ್ಟಪಡಿಸಿದರು.

▸▸ 3ನೇ ಪುಟಕ್ಕೆ

### ಕೆ.ಎಚ್. ಪಾಟೀಲ್ ಅಭಿಮಾನಿ ಬಳಗದ ಪೀರಸಾಬ ಕೌತಾಳರಿಂದ ಕಾರ್ಯಕ್ರಮ ಆಯೋಜನೆ

## 5ನೇ ವರ್ಷದ ಉಚಿತ ಸಾಮೂಹಿಕ ವಿವಾಹ



■ ವಿಜಯಸಾಕ್ಷಿ ಸುದ್ದಿ, ಗದಗ

ಇದೇ ಮಾರ್ಚ್ 3ರಂದು ಭೂಲೋಕದ ಭಗವಂತ, ನಡೆದಾಡುವ ದೇವರೆಂದೇ ಖ್ಯಾತಿ ಗಳಿಸಿರುವ ಲಿಂ. ಡಾ. ಪಂಡಿತ ಪುಟ್ಟರಾಜ ಕವಿ ಗವಾಯಿಗಳವರ 110ನೇ ಜಯಂತಿ ಅಂಗವಾಗಿ ಕೆ.ಎಚ್. ಪಾಟೀಲ್ ಅಭಿಮಾನಿ ಬಳಗದ ವತಿಯಿಂದ 5ನೇ ವರ್ಷದ ಸರ್ವ ಧರ್ಮಗಳ ಉಚಿತ ಸಾಮೂಹಿಕ ವಿವಾಹ ಸಮಾರಂಭವನ್ನ ಸಂಘಟಿಸಲಾಗಿದೆ ಎಂದು ಶ್ರೀ ವೀರೇಶ್ವರ ಪುಣ್ಯಾಶ್ರಮದ ಪೀಠಾದಿಪತಿಗಳಾದ ಶ್ರೀ ಕಲ್ಲಯ್ಯಜ್ಜನವರು ಹೇಳಿದರು.

ಶ್ರೀ ವೀರೇಶ್ವರ ಪುಣ್ಯಾಶ್ರಮದಲ್ಲಿ ಶನಿವಾರ ಜರುಗಿದ ಸುದ್ದಿಗೋಷ್ಠಿಯಲ್ಲಿ ಶ್ರೀಗಳು ಮಾತನಾಡಿ, ಗದಗ-ಬೆಟಗೇರಿ ನಗರಸಭೆಯ ಮಾಜಿ ಅಧ್ಯಕ್ಷರು ಹಾಗೂ ಡಾ. ಪಂಡಿತ ಪುಟ್ಟರಾಜ ಕವಿ ಗವಾಯಿಗಳವರ ಪರಮ ಶಿಷ್ಯರಾದ ಪೀರಸಾಬ ಕೌತಾಳರು ಕಳೆದ 10 ವರ್ಷದಿಂದ ಗುರುವರ್ಯರಾದ ಪಂಡಿತ ಪುಟ್ಟರಾಜ ಗವಾಯಿಗಳವರ ಜಯಂತಿಯನ್ನು ವಿಜ್ರಂಭಣೆಯಿಂದ ಆಚರಿಸುತ್ತಿದ್ದಾರೆ.

> ಈ ಬಾರಿ 5ನೇ ವರ್ಷದ ಸಾಮೂಹಿಕ ವಿವಾಹ ಕಾರ್ಯಕ್ರಮ ನಡೆಯಲಿದ್ದು, ಸಪ್ತಪದಿ ತುಳಿಯುವ ಜೋಡಿಗಳು ತಮ್ಮ ಅಗತ್ಯ ದಾಖಲೆಗಳೊಂದಿಗೆ ಫೆ. 20ರೊಳಗಾಗಿ ಶ್ರೀ ವೀರೇಶ್ವರ ಪುಣ್ಯಾಶ್ರಮದ ವ್ಯವಸ್ಥಾಪಕರಾದ ಹೇಮರಾಜ ಶಾಸ್ತ್ರೀಜಿ (9902402517, 9945255858) ಅವರನ್ನು ಸಂಪರ್ಕಿಸಬಹುದು. ಆಸಕ್ತರು ನೀಡಿರುವ ದಾಖಲೆಗಳನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಕಲ್ಯಾಣ ಇಲಾಖೆ ಅಧಿಕಾರಿಗಳ ಬಳಿ ಪರಿಶೀಲಿಸಿ, ದೃಢಪಡಿಸಿಕೊಂಡು ಅರ್ಹರಾದವರ ಸಾಮೂಹಿಕ ವಿವಾಹ ನೋಂದಣಿ ಮಾಡಿಕೊಳ್ಳಲಾಗುವದು ಎಂದು ಕೆ.ಎಚ್. ಪಾಟೀಲ್ ಅಭಿಮಾನಿ ಬಳಗದ ಅಧ್ಯಕ್ಷ ಪೀರಸಾಬ ಕೌತಾಳ ಹೇಳಿದರು.

▸▸ 3ನೇ ಪುಟಕ್ಕೆ

### ಕವಿವಿ ಪತ್ರಿಕೋದ್ಯಮ ವಿದ್ಯಾರ್ಥಿಗಳು-ಸಚಿವ ಎಚ್.ಕೆ. ಪಾಟೀಲರಿಂದ ಮಾದರಿ ಪತ್ರಿಕಾಗೋಷ್ಠಿ

# ಪತ್ರಕರ್ತರು ಬಡವರ ಬಗ್ಗೆ ಕಾಳಜಿ ವಹಿಸಬೇಕು

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ರಾಜ್ಯದ ಕಾರವಾರದಿಂದ ಕಾಸರಗೋಡಿನ ಗಡಿವರೆಗೆ 320 ಕಿ.ಮಿ. ಕಡಲತೀರದ ಪ್ರವಾಸೋದ್ಯಮವನ್ನು ಖಾಸಗಿ ಸಹಭಾಗಿತ್ವದಲ್ಲಿ ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಶೀಘ್ರದಲ್ಲಿ ಟೆಂಡರ್ ಕರೆಯಲಾಗುವುದು ಎಂದು ಕಾನೂನು ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಖಾತೆ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಅವರು ಕವಿವಿಯ ಪತ್ರಿಕೋದ್ಯಮ ಹಾಗೂ ಸಮೂಹ ಸಂವಹನ ವಿಭಾಗದಿಂದ ಆಯೋಜಿಸಿದ್ದ ಮಾದರಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ನನ್ನ ಲಕ್ಷ್ಯ ಐಷಾರಾಮಿ ಪ್ರವಾಸೋದ್ಯಮದ ಕಡೆಯಲ್ಲ, ಬದಲಾಗಿ ನೆಲದ ಸಂಸ್ಕೃತಿ-ಪರಂಪರೆಯನ್ನು ಬಿಂಬಿಸುವಂತ ತಾಣಗಳ ಶ್ರೇಯೋಭಿವೃದ್ಧಿ



ಮಾಡುವುದಾಗಿದೆ. ಯಲ್ಲಮ್ಮನ ಗುಡ್ಡ ಪುಣ್ಯಕ್ಷೇತ್ರದಲ್ಲಿ ಶೀಘ್ರವೇ 4 ಸಾವಿರ ವಸತಿ ಕೊಠಡಿಗಳು ಮತ್ತು ಇನ್ನಿತ್ತರ ಅಭಿವೃದ್ಧಿ ಕಾರ್ಯಗಳನ್ನು ಕೈಗೊಂಡು ಉತ್ತಮ ಪ್ರವಾಸಿ ಕೇಂದ್ರವನ್ನಾಗಿ ಅಭಿವೃದ್ಧಿಪಡಿಸಲಾಗುವುದು ಎಂದು ಹೇಳಿದರು.

ನಮ್ಮ ಸರ್ಕಾರದ ಗ್ಯಾರಂಟಿ ಯೋಜನೆಯ ಫಲವಾಗಿ ಮಹಿಳೆಯರು ಸ್ವಾವಲಂಬಿಗಳಾಗಿದ್ದಾರೆ. ಸ್ತ್ರೀ ಸ್ವಾವಲಂಬನೆಯನ್ನು ಯಶಸ್ವಿಗೊಳಿಸುವ ಮೂಲಕ ಸ್ತ್ರೀ ಶೋಷಣೆ ಪ್ರಕರಣಗಳನ್ನು ಗಣನೀಯ ಪ್ರಮಾಣದಲ್ಲಿ ಕಡಿಮೆಗೊಳಿಸಿದ್ದೇವೆ ಎಂದು ವಿದ್ಯಾರ್ಥಿಗಳ ಪ್ರಶ್ನೆಗಳಿಗೆ ಉತ್ತರಿಸಿದರು.

ಮುಂದಿನ ಲೋಕಸಭಾ ಚುನಾವಣೆಯನ್ನು ದೇಶದ ಅಭಿವೃದ್ಧಿ, ಯುವಕರ ಉದ್ಯೋಗಾವಕಾಶ, ಗಡಿ ರಕ್ಷಣೆ, ಭಾತೃತ್ವ ಭಾವನೆ ಬೆಳೆಸುವ, ದ್ವೇಷ ಅಳಿಸಿ ಪ್ರೀತಿ ಬೆಳೆಸಬೇಕ್ಕೆನ್ನುವ ದೃಷ್ಟಿಕೋನದಿಂದ ಎದುರಿಸುತ್ತೇವೆ. ಸರ್ಕಾರ ಬಂದು 8 ತಿಂಗಳಲ್ಲಿ 10 ಜನಪರ ಕಾನೂನುಗಳನ್ನು ರೂಪಿಸಲಾಗಿದೆ ಎಂದು ಹೇಳಿದರು.

ತಮ್ಮ ಬಾಲ್ಯ, ಓದು, ಪತ್ರಿಕೋದ್ಯಮ, ರಾಜಕೀಯ ಕುರಿತ ಪತ್ರಿಕೋದ್ಯಮ ವಿದ್ಯಾರ್ಥಿಗಳ ಪ್ರಶ್ನೆಗಳಿಗೆ ಸಚಿವರು ಉತ್ತರಿಸಿದರು.

ಕಾಂರ್ಯಕ್ರಮದಲ್ಲಿ ಕವಿವಿ ಕುಲಪತಿ ಪ್ರೊ. ಕೆ.ಬಿ. ಗುಡಸಿ, ಕುಲಸಚಿವ ಎ.ಚೆನ್ನಪ್ಪ ಉಪಸ್ಥಿತರಿದ್ದರು. ಸಹಪ್ರಾಧ್ಯಪಕ ಡಾ. ಸಂಜಯಕುಮಾರ ಮಾಲಗತ್ತಿ, ಮಹಾಯೋಗಿ ವೇಮನ ಪೀಠದ ಸಂಯೋಜಕ ಡಾ. ಎಚ್.ಬಿ. ನೀಲಗುಂದ ಉಪಸ್ಥಿತರಿದ್ದರು. ಪತ್ರಿಕೋದ್ಯಮ ವಿಭಾಗದ ಮುಖ್ಯಸ್ಥ ಪ್ರೊ. ಜೆ.ಎಂ. ಚಂದುನವರ ಸ್ವಾಗತಿಸಿ ವಂದಿಸಿದರು.

> ಕರ್ನಾಟಕ ವಿವಿಯಲ್ಲಿ ಪತ್ರಿಕೋದ್ಯಮ ವಿಭಾಗ ಪ್ರಾರಂಭ ಮಾಡಲು ಒತ್ತಾಯ ಮಾಡುವ ಹೋರಾಟದಲ್ಲಿ ಕೂಡ ನಾನು ಮೂಂಚೂಣಿಯಲ್ಲಿದ್ದು, ಸಿಂಡಿಕೇಟ್ ಹಾಗೂ ಸಿನೆಟ್ ಕುರಿತು ಠರಾವು ಮಾಡಿಸಿದ್ದೆವು. ಪತ್ರಿಕೋದ್ಯಮ ವಿಭಾಗದ ಬಹಳಷ್ಟು ವಿದ್ಯಾರ್ಥಿಗಳು ಮಾಧ್ಯಮ ಕ್ಷೇತ್ರದಲ್ಲಿ ಹೆಸರು ಮಾಡಿದ್ದು, ವಿಭಾಗ ಚೆನ್ನಾಗಿ ನಡೆದಿರುವುದನ್ನು ಗಮನಿಸಿದ್ದೇನೆ. ಪತ್ರಿಕೋದ್ಯಮ ಇಂದು ಬಹಳಷ್ಟು ಬದಲಾಗಿದ್ದು, ಹಿಂದೆ ಪತ್ರಿಕಾಗೋಷ್ಠಿಗೆ ಆಗಮಿಸಿದ ಕೆಲ ಪತ್ರಕರ್ತರು ಟೀ ಕುಡಿಯುವುದನ್ನೂ ನಿರಾಕರಿಸಿ ವೃತ್ತಿನಿಷ್ಠೆ ಮೆರೆದಿದ್ದನ್ನು ನೋಡಿದ್ದೇನೆ ಎಂದ ಸಚಿವ ಎಚ್.ಕೆ. ಪಾಟೀಲ, ಪತ್ರಕರ್ತರು ಬಡವರ ಬಗ್ಗೆ ಹೆಚ್ಚಿನ ಲಕ್ಷ್ಯ ವಹಿಸಬೇಕು ಎಂದರು.

# 5ನೇ ವರ್ಷದ ಉಚಿತ ಸಾಮೂಹಿಕ ವಿವಾಹ

▶▶ಮೊದಲನೇ ಪುಟದಿಂದ

ಗುರುವರ್ಯರ ಜಯಂತಿ ಅಂಗವಾಗಿ ರಚನಾತ್ಮಕ ಕಾರ್ಯ ಮಾಡುವ ಉದ್ದೇಶದಿಂದ ಪೀರಸಾಬ ಅವರು ಕಳೆದ 5 ವರ್ಷಗಳಿಂದ ಸರ್ವ ಧರ್ಮಗಳ ಉಚಿತ ಸಾಮೂಹಿಕ ವಿವಾಹ ಸಮಾರಂಭ ಮತ್ತು ಸಾಂಸ್ಕೃತಿಕ ರಸಮಂಜರಿ ಕಾರ್ಯಕ್ರಮ ಸಂಘಟಿಸುವ ಮೂಲಕ ಗುರುವರ್ಯರ ಸೇವೆಯಲ್ಲಿ ತೊಡಗಿದ್ದಾರೆ.

ಮಾರ್ಚ 3 ರಂದು ಡಾ. ಪಂಡಿತ ಪುಟ್ಟರಾಜ ಕವಿಗಳ 110ನೇ ಜಯಂತಿ ನಡೆಯಲಿದ್ದು, ಅದರಂಗವಾಗಿ 110 ಕೆಜಿ ತೂಕದ ಕೇಕ್ ಕತ್ತರಿಸುವದು, 1010 ಕುಂಭ ಹೊತ್ತ ಸುಮಂಗಲಿಯರಿಂದ ಶ್ರೀ ವೀರೇಶ್ವರ ಪುಣ್ಯಾಶ್ರಮದಿಂದ ನಗರಾದ್ಯಂತ ಮೆರವಣಿಗೆ ನಡೆಯಲಿದೆ. ಮಾರ್ಚ್ 2ರಂದು ಕೆ.ಎಚ್. ಪಾಟೀಲ್ ಸಭಾಂಗಣದ ಮುಂದಿರುವ ಆವರಣದ ವರ್ಣರಂಜಿತ ವೇದಿಕೆಯಲ್ಲಿ ರಸಮಂಜರಿ ಸಾಂಸ್ಕೃತಿಕ ಸಮಾರಂಭ ನಡೆಯಲಿದೆ ಎಂದರು.

ಪೀರಸಾಬ ಕೌತಾಳ ಮಾತನಾಡಿ, ಭೂಲೋಕದ ಭಗವಂತ, ನಡೆದಾಡುವ ದೇವರೆಂಬ ಹಿರಿಮೆಯೊಂದಿಗೆ ಸಂಗೀತ ಕ್ಷೇತ್ರ ಸೇರಿ ಸಾರ್ವಜನಿಕ ವಲಯದಲ್ಲಿ ಅಮೋಘ ಸೇವೆ ಮೆರೆದು ಇತಿಹಾಸ ಸೃಷ್ಟಿಸಿರುವ ಡಾ. ಪಂಡಿತ ಪುಟ್ಟರಾಜ ಕವಿ ಗವಾಯಿಗಳವರ ಆಶೀರ್ವಾದದಿಂದಾಗಿ ಸಾರ್ವಜನಿಕ ಬದುಕಿನಲ್ಲಿ ಉನ್ನತ ಹುದ್ದೆಯೊಂದಿಗೆ ಸೇವೆ ಮಾಡುವ ಅವಕಾಶ ದೊರೆತಿರುವದು ಜೀವನದ ಕೊನೆಯ ಉಸಿರಿರುವರೆಗೂ ಮರೆಯಲು ಸಾಧ್ಯವಿಲ್ಲ. ಶ್ರೀಗಳ ಸೇವೆ ಮಾಡಿ, ಬದುಕಿನಲ್ಲಿ ಸಾರ್ಥಕತೆ ಪಡೆದುಕೊಳ್ಳುವ ಉದ್ದೇಶದಿಂದ ಪೂಜ್ಯರ ಜನ್ಮ ದಿನಾಚರಣೆಯಂದು ಸರ್ವ ಧರ್ಮಗಳ ಉಚಿತ ಸಾಮೂಹಿಕ ವಿವಾಹ ಹಾಗೂ ರಸಮಂಜರಿ ಕಾರ್ಯಕ್ರಮವನ್ನು ಸಂಘಟಿಸುತ್ತಿದ್ದೇನೆ ಎಂದರು.

ಬಳಗದ ಸದಸ್ಯರಾದ ವಿನೋದ ಶಿದ್ಲಿಂಗ್, ಶರೀಫ, ಬಾಬಾಜಾನ ಸುದ್ದಿಗೋಷ್ಠಿಯಲ್ಲಿದ್ದರು.

### 200 ವರ್ಷಗಳಷ್ಟು ಪುರಾತನವಾದ ದೇವಸ್ಥಾನದಲ್ಲಿ ಸಂಭ್ರಮದ ವಾತಾವರಣ

# ಶಿಗ್ಲಿಯ ರಾಮ ಮಂದಿರಕ್ಕೆ ಜೀವಕಳೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರಾಮಜನ್ಮಭೂಮಿ ಅಯೋಧ್ಯೆಯಲ್ಲಿ ರಾಮಮಂದಿರ ಲೋಕಾರ್ಪಣೆಗೆ ಕ್ಷಣಗಣನೆ ಆರಂಭವಾಗಿದ್ದು, ದೇಶದ ಪ್ರತಿ ಗ್ರಾಮ, ಪಟ್ಟಣ, ನಗರ ಪ್ರದೇಶಗಳಲ್ಲಿನ ಜನರಲ್ಲಿ ಉತ್ಸಾಹ ಕಂಡು ಬರುತ್ತಿದೆ. ಈ ಹಿನ್ನೆಲೆಯಲ್ಲಿ ಪುರಾತನ ಇತಿಹಾಸ ಹೊಂದಿರುವ ರಾಮ-ಹನಮಂತನ ದೇವಸ್ಥಾನಗಳಿಗೆ ಹೊಸ ಮೆರುಗು ನೀಡಲಾಗುತ್ತಿದೆ. ಅದರಂತೆ ತಾಲೂಕಿನ ಶಿಗ್ಲಿ ಗ್ರಾಮದ ಶ್ರೀರಾಮನ ದೇವಸ್ಥಾನಕ್ಕೂ ಸುಣ್ಣ-ಬಣ್ಣದೊಂದಿಗೆ ಹೊಸ ಜೀವಕಳೆ ನೀಡಲಾಗುತ್ತಿದೆ. ದೇವಸ್ಥಾನದ ಟ್ರಸ್ಟ್‌ನವರು ಹಾಗೂ ಸಾರ್ವಜನಿಕರು ಸೇರಿ ದೇವಸ್ಥಾನವನ್ನು ಸಿಂಗರಿಸುವ ಕಾರ್ಯದಲ್ಲಿ ಉತ್ಸಾಹದಿಂದ ತೊಡಗಿಸಿಕೊಂಡಿದ್ದಾರೆ.

ಎರಡು ಶತಮಾನಗಳ ಇತಿಹಾಸ: ಶ್ರೀ ರಾಮ, ಲಕ್ಷ್ಮಣ, ಸೀತಾಮಾತಾ, ಹನಮಂತ ದೇವರ ಮೂರ್ತಿಗಳನ್ನೊಳಗೊಂಡ ವಿಶೇಷವಾದ ದೇವಸ್ಥಾನ ಶಿಗ್ಲಿಯಲ್ಲಿದೆ. ಶಿಗ್ಲಿಯ ಜನರ ಭಕ್ತಿಯಿಂದ 200 ವರ್ಷಗಳ ಈ ದೇವಸ್ಥಾನ ಅಚ್ಚುಕಟ್ಟಾಗಿ ಉಳಿದುಕೊಂಡಿದೆಯಲ್ಲದೇ ನಿತ್ಯ



ಪೂಜೆಗೊಳ್ಳುತ್ತಿದೆ. 18ನೇ ಶತಮಾನದ ಅಂತ್ಯದಲ್ಲಿ ಈ ದೇವಸ್ಥಾನ ನಿರ್ಮಾಣವಾಗಿದ್ದು, ವ್ಯಾಸರಾಯರು ಇದನ್ನು ಸ್ಥಾಪಿಸಿರಬಹುದು ಎಂದು ಹೇಳಲಾಗುತ್ತದೆ. ಹಿರಿಯರಾದ ಸೀತಾರಾಮಪ್ಪ ಹುಲಗೂರ ಹಾಗೂ ಸಾರ್ವಜನಿಕರ ಮುತುವರ್ಜಿಯಿಂದ 2012ರಲ್ಲಿ ಮಣ್ಣಿನ ದೇವಸ್ಥಾನವನ್ನು ಕಲ್ಲಿನಿಂದ ಮರುನಿರ್ಮಾಣ ಮಾಡಲಾಗಿದೆ.



**ಸುಂದರವಾದ ಮೂರ್ತಿಗಳು:** ಈ ದೇವಸ್ಥಾನಗಳಲ್ಲಿ ನೂರಾರು ವರ್ಷಗಳಷ್ಟು ಹಳೆಯದಾದ ಕಪ್ಪು ಶಿಲೆಯಲ್ಲಿ ಕೆತ್ತಲಾಗಿರುವ ಸುಂದರ ಮೂರ್ತಿಗಳು ನೋಡಲು ನಯನ ಮನೋಹರವಾಗಿವೆ. ಇಲ್ಲಿ ಶ್ರೀರಾಮ, ಲಕ್ಷ್ಮಣ, ಸೀತಾಮಾತಾ ಹಾಗೂ ಹನುಮಂತದೇವರ ಮೂರ್ತಿಗಳಿವೆ. ಶ್ರೀರಾಮ ಮತ್ತು ಲಕ್ಷ್ಮಣ ಮೂರ್ತಿಗಳು ಪ್ರಭಾವಳಿ ಸಮೇತವಾಗಿ ಸುಮಾರು ಎರಡುವರೆ ಅಡಿಗಳಷ್ಟು ಎತ್ತರವಾಗಿದ್ದರೆ, ಪಕ್ಕದಲ್ಲಿರುವ ಸೀತಾಮಾತೆ ಮತ್ತು ಹನುಮಂತನ ಮೂರ್ತಿಗಳು ಎರಡು ಕಾಲು ಅಡಿಗಳಷ್ಟು ಎತ್ತರವಾಗಿವೆ. ಈ ಭಾಗದಲ್ಲಿಯೇ ಇದೊಂದು ಪುರಾತನ ಇತಿಹಾಸವನ್ನು ಹೊಂದಿರುವ ಜಾಗೃತ ದೇವಸ್ಥಾನವಾಗಿದ್ದು, ಈ ದೇವರಿಗೆ ನಡೆದುಕೊಳ್ಳುವ ಭಕ್ತರು ಸಾಕಷ್ಟಿದ್ದಾರೆ.

200 ವರ್ಷಗಳಷ್ಟು ಹಳೆಯದಾದ ದೇವಸ್ಥಾನವನ್ನು ದಶಕಗಳ ಹಿಂದೆ ಜೀರ್ಣೋದ್ಧಾರಗೊಳಿಸಲಾಗಿದೆ. ಇಲ್ಲಿ ನಿತ್ಯ ಅರ್ಚಕ ಚಿದಾನಂದ ಹೆಬ್ಬಳ್ಳಿಯವರು ಪೂಜೆ, ಪುನಸ್ಕಾರಗಳನ್ನು ನಡೆಸುತ್ತಾರೆ. ಅಲ್ಲದೆ ರಾಮನವಮಿ, ಹನುಮಜಯಂತಿ ಇತ್ಯಾದಿಗಳನ್ನು ಸಹ ಭಕ್ತರ ಸಹಕಾರದಲ್ಲಿ ಅದ್ಧೂರಿಯಾಗಿ ಆಚರಿಸುತಿದ್ದೇವೆ. ಅಯೋಧ್ಯೆಯಲ್ಲಿ ಶ್ರೀರಾಮ ಮಂದಿರ ಉದ್ಘಾಟನೆಯಾಗುತ್ತಿರುವ ನಿಮಿತ್ತ ಜ.22ರಂದು ದೇವಸ್ಥಾನದಲ್ಲಿ ಗ್ರಾಮದವರೆಲ್ಲ ಸೇರಿ ವಿಶೇಷ ಪೂಜೆ, ಅಲಂಕಾರ ಹಾಗೂ ರಾಮನಾಮ ಜಪ ಮತ್ತು ಮಹಾಪ್ರಸಾದ ಕಾರ್ಯಕ್ರಮ ಹಮ್ಮಿಕೊಂಡಿದ್ದೇವೆ.

**– ರಾಜರತ್ನ ಹುಲಗೂರ.**
ಶ್ರೀರಾಮ ದೇವಸ್ಥಾನ ಪಂಚ ಕಮಿಟಿ ಟ್ರಸ್ಟ್ ಅಧ್ಯಕ್ಷರು.



■ವಿಜಯಸಾಕ್ಷಿ ಸುದ್ದಿ, ಗದಗ

ಬೆಟಗೇರಿಯ ಮಹಾರಾಣಾ ಪ್ರತಾಪಸಿಂಹ ಶಿಕ್ಷಣ ಸಂಸ್ಥೆಯಲ್ಲಿ ಕಳಸಾಪೂರದ ಓಂಕಾರೇಶ್ವರ ಹಿರೇಮಠದ ಶ್ರೀ ಫಕೀರೇಶ ಶಿವಾಚಾರ್ಯ ಮಹಸ್ವಾಮಿಗಳಿಗೆ ಷಷ್ಟ್ಯಬ್ಧಿ ಸಮಾರಂಭದ ನಿಮಿತ್ತ ಸಂಸ್ಥಾಪಕ ಗಣೇಶಸಿಂಗ ಬ್ಯಾಳಿ ಶಾಲು ಹೊದೆಸಿ, ಫಲಪುಷ್ಪ ನೀಡಿ ಗೌರವಿಸಿದರು. ಈ ಸಂದರ್ಭದಲ್ಲಿ ಮುಖ್ಯಾಧ್ಯಾಪಕ ಎಸ್.ಎಸ್. ಬಡಿಗೇರ, ಪ್ರಾಚಾರ್ಯ ಎ.ಎ. ಹದ್ಲಿ, ಡಿ.ಎಚ್. ಶೇಷಗಿರಿ, ಶರಣಪ್ಪ ನಾಗರಳ್ಳಿ, ಸಂಸ್ಥೆಯ ಸದಸ್ಯರಾದ ಸಿದ್ಧಪ್ಪ ಹರಿಜನ, ನಿವೃತ್ತ ಮುಖ್ಯಾಧ್ಯಾಪಕ ಕೆ.ಎಂ. ಮೂಲಿಮನಿ ಉಪಸ್ಥಿತರಿದ್ದರು.

## ಗದುಗಿನಲ್ಲಿ ಶ್ರೀರಾಮ ಮೂರ್ತಿಯ ಭವ್ಯ ಮೆರವಣಿಗೆ

▶▶ಮೊದಲನೇ ಪುಟದಿಂದ

ಶ್ರೀರಾಮ ಸೇನೆಯ ಪದಾಧಿಕಾರಿಗಳಾದ ಮಹೇಶ ರೋಖಡೆ, ಸೋಮು ಗುಡಿ, ಬಸವರಾಜ ಕುರ್ತಕೋಟಿ, ಶಿವಯೋಗಿ ಹಿರೇಮಠ, ಮಹಾಬಳೇಶ ಶೆಟ್ಟರ್, ಮೌನೇಶ ದಾಸರ, ಸತೀಶ ಕುಂಬಾರ, ಮಂಜು ಪೂಜಾರ, ರಾಮು ಗೌಡರ, ಸುನೀಲ ಮುಳ್ಳಾಳ, ಈರಣ್ಣ ಹೊಸಮನಿ, ಬಸು ಬನ್ನಿಮರದ ಮುಂತಾದವರು ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

## ವಾಯ್.ಎನ್. ಪಾಪಣ್ಣವರಗೆ ಡಾಕ್ಟರೇಟ್

■ವಿಜಯಸಾಕ್ಷಿ ಸುದ್ದಿ, ರೋಣ



ಪಟ್ಟಣದ ರಾಜೀವಗಾಂಧಿ ಶಿಕ್ಷಣ ಸಂಸ್ಥೆಯ ಬಿಇಡಿ ಕಾಲೇಜಿನ ಪ್ರಾಚಾರ್ಯ ಪ್ರೊ. ವಾಯ್. ಎನ್. ಪಾಪಣ್ಣವರರ ಬಹುಮುಖ ಪ್ರತಿಭೆ, ವಿವಿಧ ಕ್ಷೇತ್ರಗಳಲ್ಲಿ ಸಲ್ಲಿಸಿದ ಸೇವೆ ಹಾಗೂ ಶಿಕ್ಷಣ ಕ್ಷೇತ್ರಕ್ಕೆ ನೀಡಿದ ಕೊಡುಗೆಯನ್ನು ಪರಿಗಣಿಸಿ ಹೆಸ್ಸನ್ ಇಂಟರನ್ಯಾಷನಲ್ ಯುನಿವರ್ಸಿಟಿ ಜರ್ಮನಿ ಇವರು ಗೌರವ ಡಾಕ್ಟರೇಟ್ ಪದವಿ ನೀಡಿ ಗೌರವಿಸಿದ್ದಾರೆ.

ಸಂಸ್ಥೆಯ ಅಧ್ಯಕ್ಷರು ಹಾಗೂ ಶಾಸಕರಾದ ಜಿ.ಎಸ್. ಪಾಟೀಲ, ಚೇರಮನ್ ಮಿಥುನ್ ಪಾಟೀಲ, ಆಡಳಿತ ಮಂಡಳಿಯ ಸರ್ವ ಸದಸ್ಯರು, ಶಿಕ್ಷಕರು, ವಿದ್ಯಾರ್ಥಿಗಳು ಅಭಿನಂದಿಸಿದ್ದಾರೆ.

## ಮರಾಠಾ ಮಂಡಳದಲ್ಲಿ ಧಾರ್ಮಿಕ ಕಾರ್ಯಕ್ರಮಗಳು



■ವಿಜಯಸಾಕ್ಷಿ ಸುದ್ದಿ, ಗದಗ

ಜ.22ರಂದು ಅಯೋಧ್ಯಾ ಶ್ರೀರಾಮ ಮಂದಿರ ಪ್ರಾಣ ಪ್ರತಿಷ್ಠಾಪನೆ ಹಿನ್ನೆಲೆಯಲ್ಲಿ ಮರಾಠಾ ಮಂಡಳದಲ್ಲಿ ವಿಶೇಷ ಧಾರ್ಮಿಕ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ವೇ. ಮೂ ರತ್ನಾಕರ ಭಟ್ ಜೋಶಿ ಹೇಳಿದರು.

ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗದಗ ಜಿಲ್ಲಾ ಬ್ರಾಹ್ಮಣ ಸಮಾಜ, ಆದರ್ಶ ಯುವಕ ಮಂಡಳ, ಮರಾಠಾ ವಾಗ್ಮಯಿ ಪ್ರೇಮಿ ಮಂಡಳ ಹಾಗೂ ಶಂಕರ ಸೇವಾ ಸಮಿತಿ ಸಹಯೋಗದಲ್ಲಿ ಧಾರ್ಮಿಕ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಶ್ರೀರಾಮನಾಮ ಜಪ, ಭಜನೆ ಹಾಗೂ ಇನ್ನಿತರ ಧಾರ್ಮಿಕ ಕಾರ್ಯಕ್ರಮಗಳ ಜೊತೆಗೆ ಪ್ರಸಾದ ವ್ಯವಸ್ಥೆ ಮಾಡಲಾಗಿದೆ. ಗದಗ-ಬೆಟಗೇರಿಯ ಸಮಸ್ತ ಹಿಂದೂ ಬಾಂಧವರು ಈ ಧಾರ್ಮಿಕ ಕಾರ್ಯಕ್ರಮದಲ್ಲಿ ಭಾಗವಹಿಸಬೇಕು ಎಂದು ವಿನಂತಿಸಿದರು.

ಜಿಲ್ಲಾ ಬ್ರಾಹ್ಮಣ ಸಂಘದ ವೆಂಕಟೇಶ ಕುಲಕರ್ಣಿ, ಧೀರೇಂದ್ರ ಹುಯಿಲಗೋಳ, ರಾಮಚಂದ್ರ ಮೋನೆ, ವೆಂಕಟೇಶ ಪೂಜಾರ, ಕೃಷ್ಣಾಜಿ ನಾಡಿಗೇರ, ಅನಿಲ ತೆಂಬದಮನಿ, ಪ್ರಕಾಶ ಅಂಗಡಿ ಮುಂತಾದವರಿದ್ದರು.

## ಹಿದಾಯತ ಜೆ ಯು ಶಾಲೆಯಲ್ಲಿ ಮೆಹಂದಿ ಸ್ಪರ್ಧೆ




■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಹಿದಾಯತ ಜೆ ಯು ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ ಶನಿವಾರ ವಿದ್ಯಾರ್ಥಿನಿಯರಿಗಾಗಿ ಮೆಹಂದಿ ಹಚ್ಚುವ ಸ್ಪರ್ಧೆ ಏರ್ಪಡಿಸಲಾಗಿತ್ತು.

ಮೆಹಂದಿ ಕಲೆ ದೇಶದ ಸಂಸ್ಕೃತಿಯನ್ನು ಎಲ್ಲೆಡೆ ಪಸರಿಸುವ ನಿಟ್ಟಿನಲ್ಲಿ ತನ್ನದೇ ಆದ ಪ್ರಭಾವ ಬೀರಿದೆ. ಇದರ ಬಗ್ಗೆ ಹೆಚ್ಚಿನ ಅರಿವು ಮೂಡಿಸಿ, ಮುಂದಿನ ದಿನಗಳಲ್ಲೂ ಉಳಿಸಿ, ಬೆಳೆಸಲು ಶಾಲೆಯಲ್ಲಿ ಇಂತಹ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಶಾಲೆಯ ಅಧ್ಯಕ್ಷ ಜುನೇದ ಉಮಚಗಿ ಹೇಳಿದರು. ಶಾಲೆಯ ಮುಖ್ಯೋಪಾಧ್ಯಾಯರು, ಎಲ್ಲ ಶಿಕ್ಷಕರು, ಶಾಲಾ ಮಕ್ಕಳು ಉಪಸ್ಥಿತರಿದ್ದರು.

## ಅಯೋಧ್ಯೆ ಶ್ರೀರಾಮನ ನೂತನ ವಿಗ್ರಹ ಪ್ರಾಣ ಪ್ರತಿಷ್ಠಾಪನೆ ವಿಶೇಷ ಪ್ರಾರ್ಥನೆಗೆ ವ್ಹಿಎಚ್‌ಪಿ ಮನವಿ

■ವಿಜಯಸಾಕ್ಷಿ ಸುದ್ದಿ, ಗದಗ

ಅಯೋಧ್ಯೆಯ ಶ್ರೀರಾಮ ಜನ್ಮಸ್ಥಾನದ ಭವ್ಯ ಮಂದಿರದ ಗರ್ಭಗುಡಿಯಲ್ಲಿ ಶ್ರೀ ಬಾಲರಾಮನ ನೂತನ ವಿಗ್ರಹ ಪ್ರಾಣ ಪ್ರತಿಷ್ಠಾಪನೆಯು ಜ.22ರಂದು ನಡೆಯಲಿದ್ದು, ಅಂದು ಗದಗ ಜಿಲ್ಲೆಯ ಗ್ರಾಮೀಣ ಮತ್ತು ನಗರ ಪ್ರದೇಶಗಳ ಶ್ರೀರಾಮ ಮಂದಿರ ಹಾಗೂ ಇತರ ಮಂದಿರಗಳಲ್ಲಿ ಶ್ರೀರಾಮನ ಭಕ್ತರು ವಿಶೇಷ ಪೂಜೆ-ಪ್ರಾರ್ಥನೆ, ಆರಾಧನೆ ಕೈಗೊಳ್ಳಲು ಗದಗ ಜಿಲ್ಲಾ ವಿಶ್ವ ಹಿಂದೂ ಪರಿಷತ್‌ನ ಪ್ರಧಾನ ಕಾರ್ಯದರ್ಶಿ ರಾಘವೇಂದ್ರ ಹಬೀಬ ಮನವಿ ಮಾಡಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಜ. 22ರಂದು ಸೋಮವಾರ ಮುಂಜಾನೆ 11ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಅಯೋಧ್ಯೆಯಲ್ಲಿ ಪ್ರಾಣ ಪ್ರತಿಷ್ಠಾಪನೆ ನಡೆಯಲಿದ್ದು, ಇದೇ ಸಮಯದಲ್ಲಿ ಜಿಲ್ಲೆಯ ಎಲ್ಲ ದೇವಸ್ಥಾನಗಳಲ್ಲಿ ವಿಶೇಷ ಪೂಜೆ ಜರುಗಿಸಲು ವಿಶ್ವ ಹಿಂದೂ ಪರಿಷತ್ತಿನ ಕಾರ್ಯಕರ್ತರು ಮುಂದಾಗಿದ್ದಾರೆ.

ರಾಮ ಭಕ್ತರು ಒಗ್ಗೂಡಿ ಕಾರ್ಯಕ್ರಮವನ್ನು ಆಯೋಜಿಸಿ, ಟಿವಿ, ಎಲ್‌ಸಿಡಿ ಪರದೆ ಅಥವಾ ಪ್ರೊಜೆಕ್ಟರ್ ಮೂಲಕ ಅಯೋಧ್ಯೆ ಕಾರ್ಯಕ್ರಮವನ್ನು ನೇರವಾಗಿ ವೀಕ್ಷಿಸಲು ವ್ಯವಸ್ಥೆಯನ್ನು ಮಾಡುವುದು, ಆಯಾ ಮಂದಿರದಲ್ಲಿ ಪ್ರತಿಷ್ಠಾಪನೆಯಾಗಿರುವ ವಿವಿಧ ದೇವತೆಗಳ ಭಜನೆ, ಪೂಜೆ, ಆರತಿಯನ್ನು ಮಾಡುವುದು, ರಾಮ ವಿಜಯ ಮಹಾ ಮಂತ್ರವನ್ನು ಸಾಮೂಹಿಕವಾಗಿ 108 ಬಾರಿ ಪಠಣ ಮಾಡುವುದು, ಹನುಮಾನ್ ಚಾಲೀಸಾ, ಸುಂದರಕಾಂಡ ಪಾರಾಯಣ, ರಾಮರಕ್ಷಾ ಸ್ತೋತ್ರ ಪಠಣ ಕೈಗೊಳ್ಳಬೇಕು.



ಪ್ರಾಣ ಪ್ರತಿಷ್ಠಾಪನೆಯ ದಿನ ಸೂರ್ಯಾಸ್ತದ ನಂತರ ತಮ್ಮ ಮನೆಗಳ ಮುಂದೆ ಎಲ್ಲಾ ದೇವತೆಗಳನ್ನು ಪ್ರಸನ್ನಗೊಳಿಸಲು ದೀಪಗಳನ್ನು ಬೆಳಗುವಂತೆಯೂ ವಿನಂತಿಸಿದ್ದಾರೆ. ವಿಗ್ರಹ ಪ್ರಾಣ ಪ್ರತಿಷ್ಠಾಪನೆಯ ದಿನ ಯಾವುದೇ ಮೆರವಣಿಗೆ, ಶೋಭಾ ಯಾತ್ರೆ, ಸಾರ್ವಜನಿಕ ಕಾರ್ಯಕ್ರಮ ಮತ್ತು ಪಟಾಕಿ ಸಿಡಿಸುವದಕ್ಕೆ ಅವಕಾಶ ಇರುವುದಿಲ್ಲ. ಎಲ್ಲೆಡೆಯೂ ಶಾಂತಿ, ಶ್ರದ್ಧಾ-ಭಕ್ತಿಯೊಂದಿಗೆ ಕಾರ್ಯಕ್ರಮ ಸಂಪನ್ನಗೊಳಿಸಲು ಪರಿಷತ್‌ನ ಪ್ರಧಾನ ಕಾರ್ಯದರ್ಶಿ ರಾಘವೇಂದ್ರ ಹಬೀಬ ಮನವಿ ಮಾಡಿಕೊಂಡಿದ್ದಾರೆ.



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಲಕ್ಕುಂಡಿ ಗ್ರಾಮ ಪಂಚಾಯಿತಿಯಲ್ಲಿ ಮಹಾಯೋಗಿ ವೇಮನರ ಜಯಂತಿಯನ್ನು ಆಚರಿಸಲಾಯಿತು. ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ, ಉಪಾಧ್ಯಕ್ಷೆ ಪುಷ್ಪಾ ಪಾಟೀಲ, ಗ್ರಾ.ಪಂ ಸದಸ್ಯರು, ಸಿಬ್ಬಂದಿ ವರ್ಗದವರು ಹಾಜರಿದ್ದರು.

## ಬೇಡಿಕೆಗಳನ್ನು ಈಡೇರಿಸುವಂತೆ ಶಾಸಕರಿಗೆ ಮನವಿ

■ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ಮುಂಡರಗಿ ತಾಲೂಕು ಘಟಕ ಮತ್ತು ಎಲ್ಲ ವೃಂದ ಸಂಘಗಳ ನೇತೃತ್ವದಲ್ಲಿ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಶಿರಹಟ್ಟಿ ವಿಧಾನಸಭಾ ಕ್ಷೇತ್ರದ ಶಾಸಕ ಡಾ. ಚಂದ್ರು ಲಮಾಣಿ ಅವರಿಗೆ ಮನವಿ ಸಲ್ಲಿಸಿದರು.



ಈ ಸಂದರ್ಭದಲ್ಲಿ ಸರಕಾರಿ ನೌಕರರ ಸಂಘದ ಅಧ್ಯಕ್ಷ ನಾಗರಾಜ ಹಳ್ಳಿಕೇರಿ, ಪ್ರಮುಖರಾದ ಶಂಕರ ಸರ್ವದೇ, ವಿ.ವಿ. ದಿಬ್ಬದಮನಿ, ಮಲ್ಲಿಕಾರ್ಜುನ ಕಲಕಂಬಿ, ಎಸ್. ಎಸ್. ಬಿಚ್ಚಾಲಿ, ಮಹಾಂತೇಶ್ ಖೋತ, ಶಿವಕುಮಾರ ಸಜ್ಜನರ, ರವಿ ನಾಯಕ, ಲಕ್ಷ ಫಕ್ರುದ್ದೀನ್ ನದಾಫ್, ಬಿ.ಬಿ. ನಿಡಗುಂದಿ, ಯುವರಾಜ ಮುಂಡರಗಿ, ಎ.ಡಿ. ಬಂಡಿ, ಮಹಾಂತೇಶ ಹಲವಾಗಲಿ, ಕಾಶೀನಾಥ ಶಿರಬಡಗಿ, ಧನೇಶ್ ಲಮಾಣಿ , ಎಚ್.ಎಂ. ಪಾಟೀಲ್, ಎಲ್.ಆರ್. ನಾಯಕ್, ವಿ.ಎನ್. ಪೂಜಾರ, ಶಿವಯೋಗಿ ಕಲ್ಮಠ, ಎಸ್.ಎನ್. ಡೋಣಿ, ಎಂ.ಪಿ. ಶೀರನಹಳ್ಳಿ, ಡಿ.ವಿ. ಭಜಂತ್ರಿ, ವಿ.ಆರ್. ಕುರಡಗಿ, ಬಸವರಾಜ ಹಬಲಿ, ವಿ.ಎ. ಕುಂಬಾರ, ಶ್ರೀಧರ ದಾನಿ, ಸುರೇಶ ದಾವಣಗೆರೆ, ಎಚ್.ಜೆ. ಪವಾರ, ಮಹಾಂತೇಶ ಕೋನೇರಿ, ಭರತೇಶ, ವಿನಾಯಕ ಹೊಸಮನಿ, ಯಲ್ಲಪ್ಪ ದಡವಾಡ, ಹರ್ಷವರ್ಧನ, ಹೆಚ್.ಎಂ. ಕಾತರಕಿ, ಸಂತೋಷ ಜಾದವ, ಸಿದ್ದು ಮೇಟಿ, ವಿಠಲ ನಾವಳ್ಳಿ ಸೇರಿದಂತೆ ವಿವಿಧ ಸಂಘಗಳ ಪದಾಧಿಕಾರಿಗಳು ಹಾಗೂ ಮುಂಡರಗಿ ತಾಲೂಕಿನ ವಿವಿಧ ಇಲಾಖೆಯ ಅಧಿಕಾರಿಗಳು, ನೌಕರರು ಭಾಗವಹಿಸಿದ್ದರು.

## ನಿಧನ ವಾರ್ತೆ

### ಬಸವರಾಜ ಚನ್ನಬಸಪ್ಪ ಮುರಗೋಡ



ಅಣ್ಣಿಗೇರಿ, ರಾಜ್ಯ ಪ್ರಶಸ್ತಿ ಪುರಸ್ಕೃತರಾಗಿದ್ದ ಹೆಸರಾಂತ ಗಣಿತ ತಜ್ಞ, ಸ್ಥಳೀಯ ವಿದ್ಯಾನಗರ ನಿವಾಸಿ, ಬಸವರಾಜ ಚನ್ನಬಸಪ್ಪ ಮುರಗೋಡ (93) ಶುಕ್ರವಾರ ನಿಧನರಾದರು. ಪತ್ನಿ, ಮೂವರು ಪುತ್ರರು, ನಾಲ್ವರು ಪುತ್ರಿಯರು, ಬಂಧುಗಳು ಸೇರಿದಂತೆ ಅಪಾರ ಶಿಷ್ಯ ಬಳಗವನ್ನು ಅವರು ಆಗಲಿದ್ದಾರೆ.

ಅಣ್ಣಿಗೇರಿಯ ಶ್ರೀ ಅಮೃತೇಶ್ವರ ಪ್ರೌಢಶಾಲೆಯ ಸಂಸ್ಥಾಪಕ ಮುಖ್ಯೋಪಾಧ್ಯಾಯರಾಗಿದ್ದ ಅವರು, ಅಮೃತೇಶ್ವರ ಸಂಯುಕ್ತ ಪ.ಪೂ ಮಹಾವಿದ್ಯಾಲಯದ ಪ್ರಥಮ ಪ್ರಾಚಾರ್ಯರಾಗಿಯೂ ಸೇವೆ ಸಲ್ಲಿಸಿದ್ದರು. ಇವರ ಸೇವಾ ದಕ್ಷತೆಯಿಂದಾಗಿ ಹುಲಕೋಟೆಯ ಶ್ರೀ ರಾಜೇಶ್ವರಿ ವಿದ್ಯಾನಿಕೇತನ ಆಂಗ್ಲ ಮಾಧ್ಯಮ ಶಾಲೆಯ ಮುಖ್ಯೋಪಾಧ್ಯಾಯರಾಗಿ ನೇಮಕಗೊಂಡರು. ಮುರಗೋಡರ ಶೈಕ್ಷಣಿಕ ಕ್ಷೇತ್ರದಲ್ಲಿನ ಸಾಧನೆಯನ್ನು ಪರಿಗಣಿಸಿ ರಾಜ್ಯ ಸರಕಾರವು ವಿಕಲಚೇತನ ಹಾಗೂ ಹಿರಿಯ ನಾಗರಿಕರ ಸಬಲೀಕರಣ ನಿರ್ದೇಶನಲಯದ ಮೂಲಕ ರಾಜ್ಯ ಪ್ರಶಸ್ತಿ ನೀಡಿ ಗೌರವಿಸಿತ್ತು.

ಮೃತರ ಗೌರವಾರ್ಥ ಅಣ್ಣಿಗೇರಿ ಶಿಕ್ಷಣ ಸಂಸ್ಥೆಯ ಶಾಲಾ ಕಾಲೇಜುಗಳಿಗೆ ರಜೆ ಘೋಷಿಸಲಾಗಿತ್ತು. ಮುರಗೋಡ ಅವರ ನಿಧನಕ್ಕೆ ಅವರ ಅಪಾರ ಶಿಷ್ಯ ಬಳಗ ಸೇರಿದಂತೆ ಅನೇಕ ಗಣ್ಯರು ಶೋಕ ವ್ಯಕ್ತಪಡಿಸಿದ್ದಾರೆ.

### ಶಾರದಮ್ಮ ಅಂದಪ್ಪ ಕಾತರಕಿ



ನರೇಗಲ್ಲ, ಪಟ್ಟಣದ ನಿವಾಸಿ ಶಾರದಮ್ಮ ಅಂದಪ್ಪ ಕಾತರಕಿ (84) ಇವರು ಶುಕ್ರವಾರ ನಿಧನರಾದರು.

ಮೃತರಿಗೆ ನಾಲ್ವರು ಪುತ್ರರು, ಓರ್ವ ಪುತ್ರಿ, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು-ಬಳಗವಿದೆ.

## ಮಹಿಳೆ ನಾಪತ್ತೆ: ದೂರು ದಾಖಲು

■ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ತನ್ನ ಅಜ್ಜಿಯ ಮನೆಗೆ ಹೋಗಿ ಬರುವುದಾಗಿ ಹೇಳಿ ಮನೆಯಿಂದ ಹೋದ ಮಹಿಳೆಯೊಬ್ಬಳು ನಾಪತ್ತೆಯಾಗಿರುವ ಕುರಿತು ಬೆಟಗೇರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಫಿರ್ಯಾದಿದಾರನಾದ ಮಂಜುನಾಥ ನಗರ, ಕಣವಿ ಪ್ಲಾಟ್‌ನ ಪ್ರಕಾಶ ವೆಂಕಟೇಶಪ್ಪ ಬಂಡಾನವರ ಇವನ ಮಗಳಾದ ಕಾವ್ಯಾ ಪ್ರಕಾಶ ಬಂಡಾನವರ(19 ವರ್ಷ) ಜ.16ರಂದು ಮಧ್ಯಾಹ್ನ 12 ಗಂಟೆಯ ಸುಮಾರಿಗೆ ಬೆಟಗೇರಿ ಟರ್ನಲ್ ಪೇಟೆಯಲ್ಲಿರುವ ತನ್ನ ಅಜ್ಜಿಯ ಮನೆಗೆ ಹೋಗಿ ಅವಳಿಗೆ ನಾಷ್ಟಾ ಕೊಟ್ಟು ಮಾತನಾಡಿಸಿಕೊಂಡು ಬರುವುದಾಗಿ ಹೇಳಿ ತಮ್ಮ ಮನೆಯಿಂದ ಹೋದವಳು ಮರಳಿ ಮನೆಗೆ ಬಾರದೇ ಕಾಣೆಯಾಗಿದ್ದು, ತನ್ನ ಮಗಳನ್ನು ಹುಡುಕಿ ಕೊಡುವಂತೆ ದೂರು ನೀಡಿದ್ದಾರೆ.



ಫಿರ್ಯಾದಿಯನ್ನು ಸ್ವೀಕರಿಸಿರುವ ಬೆಟಗೇರಿ ಪೊಲೀಸ್ ಠಾಣಾ ಗುನ್ನಾ ನಂ- 05/2024ರಂತೆ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಕೊಂಡಿದ್ದಾರೆ.

ಕಾಣೆಯಾದವರ ವಿವರ: ಎತ್ತರ-5 ಪೂಟ್ 2 ಇಂಚು, ಚಹರೆ-ಸಾಧಾರಣವಾದ ಮೈಕಟ್ಟು, ಕೋಲು ಮುಖ, ಕೆಂಪು ಮೈ ಬಣ್ಣ, ನೆಟ್ಟನೆಯ ಮೂಗು, ಕಪ್ಪು ಕಣ್ಣು, ತಲೆಯಲ್ಲಿ ಉದ್ದನೆಯ ಕಪ್ಪು ಕೂದಲು, ಏರು ಹಣೆ ಇರುತ್ತದೆ. ಮನೆಯಿಂದ ಹೋಗುವಾಗ ಬೂದು ಬಣ್ಣದ ಟಾಪ್ ಮತ್ತು ಕಪ್ಪು ಬಣ್ಣದ ಪ್ಯಾಂಟ್ ಮತ್ತು ಬಿಳಿ ಬಣ್ಣದಲ್ಲಿ ಕಪ್ಪು ಚುಕ್ಕೆ ಇರುವ ವೇಲ್ ಧರಿಸಿರುತ್ತಾಳೆ.

ಈ ಚಹರೆಯುಳ್ಳ ಮಹಿಳೆಯು ಕಂಡು ಬಂದಲ್ಲಿ ಬೆಟಗೇರಿ ಪೊಲೀಸ್ ಠಾಣೆ-08372-246333, ಪಿಎಸ್‌ಐ ಬೆಟಗೇರಿ-9480804449, betagerigdg@ksp.gov.in ಗದಗ ಕಂಟ್ರೋಲ್ ರೂಮ್-08372-238300/ 9480804400, dcgdg@ksp.gov.in ಇಲ್ಲಿಗೆ ಮಾಹಿತಿ ತಿಳಿಸುವಂತೆ ಪ್ರಕಟಣೆ ತಿಳಿಸಿದೆ.

# ಕಾಯ್ದೆ ಉಲ್ಲಂಘನೆಯಾಗದಂತೆ ಸ್ಕ್ಯಾನಿಂಗ್ ಸೆಂಟರ್ ಕಾರ್ಯನಿರ್ವಹಿಸಲು ಸೂಚನೆ



■ ವಿಜಯಸಾಕ್ಷಿ ಸುದ್ದಿ, ಗದಗ

ಭ್ರೂಣಲಿಂಗ ಪತ್ತೆ ಮಾಡುವ ಹಾಗೂ ಪಿ.ಸಿ. ಮತ್ತು ಪಿ.ಎನ್.ಡಿ.ಟಿ ಕಾಯ್ದೆ ಉಲ್ಲಂಘನೆಯಾಗದಂತೆ ಜಿಲ್ಲೆಯ ಸ್ಕ್ಯಾನಿಂಗ್ ಸೆಂಟರ್‌ಗಳು ಕಾರ್ಯನಿರ್ವಹಿಸುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಎಸ್.ಎಸ್.ನೀಲಗುಂದ ಸೂಚನೆ ನೀಡಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯದಲ್ಲಿ ಶನಿವಾರದಂದು ಜರುಗಿದ ಜಿಲ್ಲಾ ಸಲಹಾ ಸಮಿತಿ ಹಾಗೂ ಜಿಲ್ಲಾ ತಪಾಸಣಾ ಮತ್ತು ಮೇಲ್ವಿಚಾರಣಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.


ಜಿಲ್ಲೆಯಲ್ಲಿ ಹೊಸದಾಗಿ ಸ್ಕ್ಯಾನ್ ಮಷೀನ್‌ಗಳನ್ನು ನೋಂದಾಯಿಸಲು ಆಗಮಿಸಿದ ಸಂದರ್ಭದಲ್ಲಿ ಸಂಬಂಧಿಸಿದ ಅಧಿಕಾರಿಗಳು ಕೂಲಂಕೂಷವಾಗಿ ಪರಿಶೀಲಿಸುವಂತೆ ಅವರು ತಿಳಿಸಿದರು.

ಸ್ಕ್ಯಾನ್ ಸೆಂಟರ್‌ಗಳಲ್ಲಿ ಹೊರ ಜಿಲ್ಲೆಯಿಂದ ಆಗಮಿಸಿ ಅನುಮತಿ ಪಡೆಯದೇ ಕಾರ್ಯನಿರ್ವಹಿಸುತ್ತಿರುವ ತಜ್ಞ ವೈದ್ಯರ ವಿರುದ್ಧ ಕ್ರಮ ಕೈಗೊಳ್ಳಬೇಕು. ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ಕ್ಯಾನ ಸೆಂಟರ್‌ಗಳ ಮುಖ್ಯಸ್ಥರೊಂದಿಗೆ ಸಭೆಗಳನ್ನು ಆಯೋಜಿಸಿ ಪಿ.ಸಿ. ಮತ್ತು ಪಿ.ಎನ್.ಡಿ.ಟಿ ಕಾಯ್ದೆ ಕುರಿತು ಸಲಹೆ ಸೂಚನೆಗಳನ್ನು ನೀಡಲು ತಿಳಿಸಿದರು.

ಜಿಲ್ಲಾ ತಪಾಸಣಾ ಮತ್ತು ಮೇಲ್ವಿಚಾರಣಾ ಸಮಿತಿಯ ಅಧ್ಯಕ್ಷ ಡಾ.ವಾಯ್.ಕೆ.ಭಜಂತ್ರಿ ಮಾತನಾಡಿ, ಸ್ಕ್ಯಾನಿಂಗ್ ಸೆಂಟರ್‌ಗೆ ಬರುವ ರೋಗಿಗಳ ದಾಖಲಾತಿಗಳನ್ನು ಕಡ್ಡಾಯವಾಗಿ ಪರಿಶೀಲಿಸಿಬೇಕು. ಸ್ಕ್ಯಾನ್ ಮಷೀನ್ ಕುರಿತಾದ ದಾಖಲಾತಿಗಳನ್ನು ಸರಿಯಾಗಿ ಶೇಖರಿಸಿ ಪ್ರತಿ ತಿಂಗಳ 5ನೇ ತಾರೀಖಿನೊಳಗೆ ವರದಿಯನ್ನು ಸಲ್ಲಿಸುವಂತೆ ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಆಸ್ಪತ್ರೆ ರೇಡಿಯೋಲಾಜಿಸ್ಟ್‌ಗಳಾದ ಡಾ.ರಾಹುಲ್ ಶಿರೋಳ, ಡಾ. ವೀರೇಶ್ ಹಂಚಿನಾಳ, ಚಿಕ್ಕ ಮಕ್ಕಳ ತಜ್ಞರಾದ ಡಾ. ಶಿವನಗೌಡ, ವಕೀಲರಾದ ಆರ್.ಎಸ್.ವಡ್ರಳ್ಳಿ, ಸೇರಿದಂತೆ ವಿವಿಧ ಆಸ್ಪತ್ರೆ, ಸ್ಕ್ಯಾನ್ ಸೆಂಟರ್‌ಗಳ ಮುಖ್ಯಸ್ಥರು ಉಪಸ್ಥಿತರಿದ್ದರು.

# ವಿಠ್ಠಲ ರುಕ್ಮಾಯಿ ದೇವಸ್ಥಾನದಲ್ಲಿ ವಿಶೇಷ ಕಾರ್ಯಕ್ರಮ



■ ವಿಜಯಸಾಕ್ಷಿ ಸುದ್ದಿ, ಗದಗ

ಜ.22ರಂದು ಅಯೋಧ್ಯೆಯಲ್ಲಿ ಶ್ರೀ ರಾಮ ಲಲ್ಲಾ ಪ್ರಾಣ ಪ್ರತಿಷ್ಠಾಪನೆ ಹಾಗೂ ಮಂದಿರ ಲೋಕಾರ್ಪಣೆ ನಿಮಿತ್ತ ಇಲ್ಲಿನ ದಾಸರ ಓಣಿಯ ಶ್ರೀ ವಿಠ್ಠಲ ರುಕ್ಮಾಯಿ ದೇವಸ್ಥಾನದಲ್ಲಿ ಧಾರ್ಮಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಬೆಳಿಗ್ಗೆ 6ರಿಂದ 7ರವರೆಗೆ ಕಾಕಡಾರತಿ, 7.30ರಿಂದ 10ರ ವರೆಗೆ ಜ್ಞಾನೇಶ್ವರಿ ಪಾರಾಯಣ ನಂತರ ಉಪಹಾರ, 10.30 ಗಂಟೆಗೆ ಶ್ರೀರಾಮ ಲಕ್ಷ್ಮಣ ಸೀತೆ ಹನುಮಂತ ರೂಪಧಾರಿಗಳಿಗೆ ಜೋಡ ಮಾರುತಿ ದೇವಸ್ಥಾನದಿಂದ ಸಂತ ಮಂಡಳಿ ಭಜನೆಯೊಂದಿಗೆ ಬರಮಾಡಿಕೊಳ್ಳವುದು, ಶ್ರೀರಾಮ ಕಥಾ ಪ್ರವಚನ, ಮಹಿಳಾ ಮಂಡಳ ವತಿಯಿಂದ ಶ್ರೀರಾಮ ಜಪ, ಶ್ರೀರಾಮರಕ್ಷಾ ಸ್ತೋತ್ರ ಪಠಣ, ಹನುಮಾನ ಚಾಲೀಸಾ ಪಠಣ ಕಾರ್ಯಕ್ರಮಗಳು ನೆರವೇರಲಿವೆ.

ನಂತರ ಮಹಾಪ್ರಸಾದ ಕಾರ್ಯಕ್ರಮ ನಡೆಯಲಿದ್ದು, ಎಲ್ಲ ಸದ್ಭಕ್ತರು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಶ್ರೀ ರಾಮನ ಕೃಪೆಗೆ ಪಾತ್ರರಾಗಬೇಕೆಂದು ಪ್ರಕಟಣೆ ವಿನಂತಿಸಿದೆ.

# ಅಯೋಧ್ಯಾ ಕರಪತ್ರ, ಅಕ್ಷತೆ ವಿತರಣೆ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರಾಮ ಜನ್ಮಭೂಮಿ ಅಯೋಧ್ಯೆಯಲ್ಲಿ ಜ.22ರಂದು ಪ್ರಾಣ ಪ್ರತಿಷ್ಠಾಪನೆ ನಡೆಯಲಿರುವ ಹಿನ್ನೆಲೆಯಲ್ಲಿ ತಾಲೂಕಿನ ಬಾಲೆಹೊಸೂರ ಗ್ರಾಮದಲ್ಲಿ ರಾಮ ಭಕ್ತರು ಶ್ರೀರಾಮ ವೇಷಧಾರಿಗಳೊಂದಿಗೆ ಮನೆ ಮನೆಗೆ ತೆರಳಿ ಮಂತ್ರಾಕ್ಷತೆ, ಕರಪತ್ರ ವಿತರಿಸಿದರು.

ವೇಷಗಾರ ಕುಟುಂಬದ ಚನ್ನಪ್ಪ ಗಣಾಚಾರಿ ರಾಮನ ಪಾತ್ರದಲ್ಲಿ, ಮಾರುತಿ ಗಣಾಚಾರಿ(ಲಕ್ಷ್ಮಣ) ಮಂಜಪ್ಪ ಗಣಾಚಾರಿ-ಹನಮಂತ, ಗಗನ ಮರಳಿಹಳ್ಳಿ-ನಾರದ, ಶಿವಲಿಂಗಪ್ಪ ಗಣಾಚಾರಿ ಸೀತೆಯ ಪಾತ್ರದಲ್ಲಿ ರಾಮನನ ಮಹಿಮೆ ಸಾರಿದರು. ಈ ವೇಳೆ ಹಿರಿಯರಾದ ಷಣ್ಮುಖಯ್ಯ ಮಾದಾಪುರಮಠ, ಭೀಮಣ್ಣ ಒಂಟಿ, ಶಿವಲಿಂಗಪ್ಪ ಮೆಳ್ಳಿ, ನಾಗಯ್ಯ ಮಠಪತಿ, ಸಿದ್ದಪ್ಪ ನೆನಗನಹಳ್ಳಿ, ಅಪ್ಪಣ್ಣ ಕುಬೇರ, ದೇವಣ್ಣ ಮತ್ತೂರ, ಜಗದೀಶ ಹುಲ್ಲೂರ, ವಿರುಪಾಕ್ಷಪ್ಪ ಮರಳಿಹಳ್ಳಿ, ರಮೇಶ ಜೋಗೇರ ಮುಂತಾದವರು ಪಾಲ್ಗೊಂಡಿದ್ದರು.

# ಶರಣ ಸಂಗಮ ಕಾರ್ಯಕ್ರಮ ಇಂದು



■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಜ. 21ರ ಬೆಳಿಗ್ಗೆ 11 ಗಂಟೆಗೆ ನಡೆಯಲಿರುವ ಬಸವದಳದ 1577ನೇ ಶರಣ ಸಂಗಮದಲ್ಲಿ 'ಕರ್ನಾಟಕದ ಸಾಂಸ್ಕೃತಿಕ ನಾಯಕ ಬಸವಣ್ಣ' ವಿಷಯದ ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಶರಣತತ್ವ ಚಿಂತಕ ಶರಣ ಎನ್.ಎಚ್. ಹಿರೇಸಕ್ಕರಗೌಡ್ರ ವಹಿಸುವರು. ನರೇಗಲ್ಲದ ಸರಕಾರಿ ಪ.ಪೂ ಮಹಾವಿದ್ಯಾಲಯದ ಪ್ರಾಚಾರ್ಯ, ಶರಣತತ್ವ ಚಿಂತಕ ಎನ್. ಎಂ. ಪವಾಡಿಗೌಡ್ರ ಉಪನ್ಯಾಸ ಮಾಡುವರು. ಎಚ್.ಸಿ.ಇ.ಎಸ್. ಪ.ಪೂ ಮಹಾವಿದ್ಯಾಲಯದ ಪ್ರಾಚಾರ್ಯರಾದ ಶರಣ ಪ್ರೊ. ಬಿ.ಬಿ. ಪಾಟೀಲರನ್ನು ಸನ್ಮಾನಿಸಲಾಗುವುದು.

ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.




■ ವಿಜಯಸಾಕ್ಷಿ ಸುದ್ದಿ, ಗದಗ

ಬೆಂಗಳೂರಿನ ರಾಜ್ಯ ಬಿಜೆಪಿ ಕಾರ್ಯಾಲಯದಲ್ಲಿ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜೇಂದ್ರ ಅವರು ಗದಗ ಜಿಲ್ಲಾ ಭಾರತೀಯ ಜನತಾ ಪಾರ್ಟಿಯ ನೂತನ ಜಿಲ್ಲಾಧ್ಯಕ್ಷರಾದ ರಾಜು ಕುರುಡಗಿ ಅವರಿಗೆ ಆದೇಶ ಪ್ರತಿಯನ್ನು ನೀಡಿದರು. ಈ ಸಂದರ್ಭದಲ್ಲಿ ರಾಜ್ಯ ಬಿಜೆಪಿ ಪ್ರಧಾನ ಕಾರ್ಯದರ್ಶಿ ಪಿ.ರಾಜೀವ, ಪ್ರೀತಂ ಗೌಡ್ರು, 39 ಸಂಘಟನಾತ್ಮಕ ನೂತನ ಜಿಲ್ಲಾಧ್ಯಕ್ಷರು, ಮೋರ್ಚಾ ರಾಜ್ಯಾಧ್ಯಕ್ಷರು ಹಾಗೂ ಪ್ರಧಾನ ಕಾರ್ಯದರ್ಶಿಗಳು ಉಪಸ್ಥಿತರಿದ್ದರು.

# ಬೀದಿ ಬದಿ ವ್ಯಾಪಾರಿ ಒಕ್ಕೂಟದಿಂದ ಪುರಸಭೆಗೆ ಮನವಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕಾನೂನಿನನ್ವಯ ಬೀದಿ ಬದಿ ವ್ಯಾಪಾರಿಗಳಿಂದ ದೈನಂದಿನ ಬಾಡಿಗೆ ಶುಲ್ಕ ವಸೂಲಿ ಮಾಡದೇ ಸಂತೆ ದಿನ ಮಾತ್ರ ಶುಲ್ಕ ಸಂಗ್ರಹಣೆ ಮಾಡಬೇಕು, ಈ ಬಗ್ಗೆ ಶುಲ್ಕ ವಸೂಲಿ ಗುತ್ತಿಗೆ ಹರಾಜು ಪ್ರಕ್ರಿಯೆ ಮುಂದೂಡಬೇಕು ಮತ್ತು ಗುತ್ತಿಗೆದಾರರಿಗೆ ಸ್ಪಷ್ಟೀಕರಣ ನೀಡಬೇಕು ಎಂದು ಪಟ್ಟಣದ ಬೀದಿ ಬದಿ ವ್ಯಾಪಾರಿ ಒಕ್ಕೂಟದಿಂದ ಪುರಸಭೆಗೆ ಮನವಿ ಸಲ್ಲಿಸಲಾಯಿತು.

ಸಂಘಟನೆಗಳ ಒಕ್ಕೂಟದ ಲಕ್ಷ್ಮೇಶ್ವರ ತಾಲೂಕು ಘಟಕ ಅಧ್ಯಕ್ಷ ಮಂಜುನಾಥ ಹೊಗೆಸೊಪ್ಪಿನ ಮಾತನಾಡಿ, ಬೀದಿ ಬದಿ ವ್ಯಾಪಾರಸ್ಥರ ಮಾರುಕಟ್ಟೆ ಪ್ರದೇಶ ಘೋಷಣೆ ಮಾಡಿ ಸರ್ಕಾರದ ಸೌಲಭ್ಯಗಳನ್ನು ಕಲ್ಪಿಸಬೇಕು. ವಸೂಲಾದ ಸಂತೆ ಶುಲ್ಕ ಬೀದಿ ಬದಿ ವ್ಯಾಪಾರಸ್ಥರ ಕಲ್ಯಾಣಕ್ಕೆ ಬಳಕೆಯಾಗಬೇಕು ಎಂದು ಮನವಿ ಮಾಡಿದರು.

ಮನವಿ ಸ್ವೀಕರಿಸಿದ ಪುರಸಭೆ ಮುಖ್ಯಾಧಿಕಾರಿ ಶಂಕರ ಹುಲ್ಲಮ್ಮನವರ, ಬೀದಿ ಬದಿ ವ್ಯಾಪಾರಸ್ಥರ ಬಾಡಿಗೆ ಶುಲ್ಕದ ಸಂಪೂರ್ಣ ವಿನಾಯಿತಿ ಯಾವುದೇ ಸ್ಥಳೀಯ ಸಂಸ್ಥೆಯಲ್ಲಿಲ್ಲ. ಪುರಸಭೆ ವ್ಯಾಪ್ತಿಯಲ್ಲಿನ ಎಲ್ಲ ರೀತಿಯ ವ್ಯಾಪಾರಕ್ಕೂ ಪ್ರತ್ಯೇಕವಾದ ಶುಲ್ಕ ವಿಧಿಸುವ ಕಾನೂನಿದೆ. ತಮ್ಮ ಮನವಿಯನ್ನು ಹಿರಿಯ ಅಧಿಕಾರಿಗಳಿಗೆ ಸಲ್ಲಿಸಿ ಕ್ರಮ ಕೈಗೊಳ್ಳಲಾಗುವುದು ಎಂದರು.

ಈ ವೇಳೆ ಸದಾನಂದ ನಂದೆಣ್ಣನವರ, ಹನಮಂತಪ್ಪ ರಾಮಗೇರಿ, ದಾದಾಪೀರ ಬೆಂಡಿಗೇರಿ, ಮಂಜುನಾಥ ಬಸಾಪುರ, ಪರಶುರಾಮ ಬಳ್ಳಾರಿ, ಮೆಹಬೂಬಸಾಬ ಬಳ್ಳಾರಿ, ಮಾಬುಸಾಬ ಸುಂಡಕೆ, ರಾಜೇಸಾಬ ಮುಲ್ಲಾನವರ, ಲಕ್ಷ್ಮಣ ಮುಳುಗುಂದ, ಸೋಮವ್ವ ಬೆಟಗೇರಿ, ಶಬ್ಬೀರ ಅಹ್ಮದ ಶಿರಹಟ್ಟಿ, ಶಂಭೂ ತಂಡಿಗೇರ, ಅಭಿಷೇಕ ಸಾತಪುತೆ ಸೇರಿ ಅನೇಕ ಬೀದಿ ಬದಿ ವ್ಯಾಪಾರಸ್ಥರು ಇದ್ದರು.

## ಜನರಿಗೆ ಧೈರ್ಯ ತುಂಬುವದು ಪಥ ಸಂಚಲನದ ಉದ್ದೇಶ: ಬಿ.ಸಿ. ರಾಯ್

# ಆರ್‌ಎಎಫ್‌ನಿಂದ ರೂಟ್ ಮಾರ್ಚ್



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿನ ವಾತಾವರಣ, ಸಂಸ್ಕೃತಿಯ ಬಗ್ಗೆ ಮಾಹಿತಿ ಪಡೆಯಲು ಹಾಗೂ ಜನರಿಗೆ ಧೈರ್ಯ ತುಂಬುವ ದೃಷ್ಟಿಯಿಂದ ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಶನಿವಾರ ರ್‍ಯಾಪಿಡ್ ಆ್ಯಕ್ಷನ್ ಫೋರ್ಸ್‌ನಿಂದ ರೂಟ್ ಮಾರ್ಚ್ ನಡೆಸಲಾಯಿತು.

ಆರ್‌ಎಎಫ್ ತಂಡದ ಅಸಿಸ್ಟಂಟ್ ಕಮಾಂಡಂಟ್ ಬಿ.ಸಿ. ರಾಯ್, ತಹಸೀಲ್ದಾರ ವಾಸುದೇವ ಸ್ವಾಮಿ, ಸಿಪಿಐ ನಾಗರಾಜ ಮಾಡಳ್ಳಿ, ಕ್ರೈಂ ವಿಭಾಗದ ಪಿಎಸ್‌ಐ ವಿ.ಜಿ. ಪವಾರ ಅವರ ನೇತೃತ್ವದ ತಂಡದಿಂದ ರೂಟ್ ಮಾರ್ಚ್ ಜರುಗಿತು.

ನಂತರ ಪೊಲೀಸ್ ಠಾಣೆಯಲ್ಲಿ ಆರ್‌ಎಎಫ್ ತಂಡದ ಅಸಿಸ್ಟಂಟ್ ಕಮಾಂಡಂಟ್ ಬಿ.ಸಿ. ರಾಯ್ ಮಾಹಿತಿ ನೀಡಿ, ಜಿಲ್ಲೆಯಾದ್ಯಂತ ಪ್ರಮುಖ ಸ್ಥಳಗಳಲ್ಲಿ ಸಂಚರಿಸಿ ಸ್ಥಳೀಯ ಪರಿಸ್ಥಿತಿಯ ಮಾಹಿತಿ ಪಡೆಯುವದು ಈ ರೂಟ್ ಮಾರ್ಚ್‌ನ ಉದ್ದೇಶವಾಗಿದೆ. ಆರ್‌ಎಎಫ್ ತಂಡಕ್ಕೆ ಕರ್ತವ್ಯ ನಿರ್ವಹಿಸುವ ಸಂದರ್ಭದಲ್ಲಿ ತಾವು ನಿರ್ವಹಿಸುವ ಸ್ಥಳ ಅಪರಿಚಿತವೆನಿಸಬಾರದು ಎನ್ನುವ ಉದ್ದೇಶದಿಂದ ಈ ಕಾರ್ಯಕ್ರಮ ಏರ್ಪಡಿಸಲಾಗಿದೆ. ಯಾವುದೇ ಚುನಾವಣೆ ಸಂಬಂಧಿತ ಅಥವಾ ಅಯೋಧ್ಯಾ ರಾಮಮಂದಿರ ಉದ್ಘಾಟನೆ ಕಾರಣಕ್ಕೆ ಈ ತಂಡ ಆಗಮಿಸಿಲ್ಲ. ಇದೊಂದು ಸಾಮಾನ್ಯ ಪ್ರಕ್ರಿಯೆಯಾಗಿದೆ. ಜನರಿಗೆ ಧೈರ್ಯ ತುಂಬುವದು ಇದರ ಉದ್ದೇಶವಾಗಿದೆ ಎಂದರು.

ಸಿಪಿಐ ನಾಗರಾಜ ಮಾಡಳ್ಳಿ ಮಾತನಾಡಿ, ಇದೊಂದು ಸಹಜವಾಗಿ ನಡೆಯುವ ರೂಟ್ ಮಾರ್ಚ್ ಪ್ರಕ್ರಿಯೆಯಾಗಿದೆ. ಜನರು ಯಾವುದೇ ಒತ್ತಡಗಳಿಗೆ ಒಳಗಾಗುವದು ಬೇಡ, ಇಲ್ಲಿನ ಸಂಸ್ಕೃತಿ ತಿಳಿಯುವ ಹಾಗೂ ಜನರ ವಿಶ್ವಾಸ ಗಳಿಸುವ ಉದ್ದೇಶದೊಂದಿಗೆ ಈ ರೂಟ್ ಮಾರ್ಚ್‌ನ್ನು ಜರುಗಿಸಲಾಗುತ್ತಿದೆ. ಈ ಹಿನ್ನೆಲೆಯಲ್ಲಿ 80 ಪುರುಷ ಹಾಗೂ 7 ಜನ ಮಹಿಳಾ ಸೈನಿಕರ ಆರ್‌ಎಎಫ್ ತಂಡ ಪಟ್ಟಣಕ್ಕೆ ಆಗಮಿಸಿದೆ ಎಂದು ಹೇಳಿದರು.

ತಹಸೀಲ್ದಾರ ವಾಸುದೇವ ಸ್ವಾಮಿ, ಆರ್‌ಎಎಫ್‌ನ ರಾಜ್ ಪಾಂಡೆ, ಕ್ರೈಂ ವಿಭಾಗದ ಪಿಎಸ್‌ಐ ವಿ.ಜಿ. ಪವಾರ, ಎಎಸ್‌ಐ ಎಸ್.ಎ. ಮೌಲ್ವಿ, ಸಿ.ಬಿ. ಮಡಿವಾಳರ ಸೇರಿದಂತೆ ಅನೇಕರಿದ್ದರು.

ಪೊಲೀಸ್ ಠಾಣೆಯಿಂದ ಪ್ರಾರಂಭವಾದ ರೂಟ್ ಮಾರ್ಚ್ ಶಿಗ್ಲಿ ನಾಕಾ, ಹೊಸ ಬಸ್ ನಿಲ್ದಾಣ, ಅಂಬೇಡ್ಕರ್ ನಗರ, ತೇರಿನಮನೆ ರಸ್ತೆ, ಬಳಿಗಾರ ಓಣಿ, ದೂದನಾನಾ ದರ್ಗಾ ಪೇಟೆ ಮಾರ್ಗವಾಗಿ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಕೊನೆಗೆ ಪೊಲೀಸ್ ಠಾಣೆಗೆ ಬಂದು ಮುಕ್ತಾಯಗೊಂಡಿತು.


**ಪಟ್ಟಣ ಪಂಚಾಯತ ಕಾರ್ಯಾಲಯ, ಶಿರಹಟ್ಟಿ-582120**

ಕ್ರಸಂ:ಪಪಂಶಿ/ಎಸ್.ಎಫ್.ಸಿ&ಕು.ನೀ.ಸ.ಪ.ಅ/ಟೆಂಡರ/2023-24

ದಿನಾಂಕ : 20-01-2024

**ಅಲ್ಪಾವಧಿ ಟೆಂಡರ್ ಪ್ರಕಟಣೆ ಇ-ಪ್ರೋಕ್ಯೂರಮೆಂಟ್ ಮೂಲಕ**

ಮುಖ್ಯಾಧಿಕಾರಿಗಳು ಪಟ್ಟಣ ಪಂಚಾಯತ ಶಿರಹಟ್ಟಿ ಇವರಿಂದ ಶಿರಹಟ್ಟಿ ಪಟ್ಟಣ ಪಂಚಾಯತ ವ್ಯಾಪ್ತಿಯಲ್ಲಿ ಕರ್ನಾಟಕ ಪಾರದರ್ಶಕತೆ ಅಧಿನಿಯಮ-2000ರ ಪ್ರಕಾರ "ಕರ್ನಾಟಕ ಪಬ್ಲಿಕ-ಪ್ರೊಕ್ಯೂರ್‌ಮೆಂಟ್" ಪದ್ಧತಿಯಲ್ಲಿ ಸನ್ 2023-24 ನೇ ಸಾಲಿನ ಎಸ್.ಎಫ್.ಸಿ ಮುಕ್ತ ನಿಧಿ, ಶೇ 24.10% ಹಾಗೂ ಸನ್ 2022-23, 2023-24 ನೇ ಸಾಲಿನ ಎಸ್.ಎಫ್.ಸಿ ಕುಡಿಯುವ ನೀರಿನ ಸಮಸ್ಯೆ ಪರಿಹರಿಸುವ ಅನುದಾನದ ಇಂಡೆಂಟ್ ನಂ-**13076(SC), 13075(ST), 13047, 12540, 12539(SC), 12536** ಈ ಕೆಳಗೆ ನಮೂದಿಸಿದ ಕಾಮಗಾರಿಗಳ ಒಟ್ಟು ಮೊತ್ತ ರೂ. **36.45** ಲಕ್ಷ ನಿರ್ವಹಣೆಗಾಗಿ ಕೆ.ಡಬ್ಲ್ಯು-1 & 2 ದಸ್ತಾವೇಜ್‌ನಲ್ಲಿ ಕರ್ನಾಟಕ ಪಬ್ಲಿಕ ಪ್ರೊಕ್ಯೂರಮೆಂಟ್ ಪೋರ್ಟಲ್‌ನಲ್ಲಿ ನೊಂದಾಯಿಸಲ್ಪಟ್ಟ ಮತ್ತು ಲೋಕೋಪಯೋಗಿ ಇಲಾಖೆಯಲ್ಲಿ ನೊಂದಾಯಿತ ಹಾಗೂ ಇಂದನ ಇಲಾಖೆಯಲ್ಲಿ ನೊಂದಾಯಿತ ಅರ್ಹ ಗುತ್ತಿಗೆದಾರರಿಂದ ಟೆಂಡರ್‌ನ್ನು ಆಹ್ವಾನಿಸಲಾಗಿದೆ. ಪ್ರೊಕ್ಯೂರಮೆಂಟ್ ದಾಖಲೆಗಳಿಗಾಗಿ **https://kppp.karnataka.gov.in/#/portal/portal-home** ರ ಮೂಲಕ ಕೆಳಗೆ ನಮೂದಿಸಿರುವ ದಿನಾಂಕದಂದು ಆನ್‌ಲೈನ್ ಮೂಲಕವೇ ಟೆಂಡರ ಸಲ್ಲಿಸುವುದು. (1) ಇ-ಪ್ರೋಕ್ಯೂರಮೆಂಟ್ ಪದ್ಧತಿಯಲ್ಲಿ ಟೆಂಡರ ಸಲ್ಲಿಸುವ ಕೊನೆಯ ದಿನಾಂಕ : **05-02-2024** ಸಂಜೆ 5-00 ರ ವರೆಗೆ (2) ಟೆಂಡರನ್ನು ತೆರೆಯುವ ದಿನಾಂಕ ಮತ್ತು ಸಮಯ : **06-02-2024** ರಂದು ಸಾಯಂಕಾಲ 5-30 ಗಂಟೆಗೆ.

ನಿಗಧಿಪಡಿಸಿದ ದಿನಾಂಕಗಳು ಒಂದು ವೇಳೆ ರಜಾ ದಿನಗಳನ್ನಾಗಿ ಘೋಷಿಸಲ್ಪಟ್ಟರೆ ಮುಂದಿನ ದಿನಾಂಕವನ್ನು ಪರಿಗಣಿಸಲಾಗುವುದು. ಯಾವುದೇ ತಿದ್ದುಪಡಿಗಳನ್ನು ಪತ್ರಿಕೆಗಳಲ್ಲಿ ಪ್ರಕಟಿಸಲಾಗುವುದಿಲ್ಲ.

ಈ ಕಛೇರಿಯಲ್ಲಿ ಯಾವುದೇ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲಾ. ಕಾಮಗಾರಿ ಇ.ಎಮ್.ಡಿ ಪೂರ್ಣಗೊಳಿಸುವ ಅವಧಿ, ಗುತ್ತಿಗೆದಾರರ ದರ್ಜೆ ಹಾಗೂ ಇನ್ನೀತರ ಹೆಚ್ಚಿನ ಮಾಹಿತಿ ಹಾಗೂ ಷರತ್ತುಗಳಿಗೆ ಕಛೇರಿಯ ವೆಬ್‌ಸೈಟ್ **www.shirahattitown.gov.in.** ಹಾಗೂ ಕಛೇರಿ ವೇಳೆಯಲ್ಲಿ ಸಂಬಂಧಿಸಿದ ಶಾಖೆಯಲ್ಲಿ ಮಾಹಿತಿಯನ್ನು ಪಡೆಯಬಹುದು. ಇ-ಪ್ರೋಟಲ್‌ನ ಎಲ್ಲ ಷರತ್ತುಗಳು ಅನ್ವಯಿಸುತ್ತವೆ. ಹಾಗೂ ಟೆಂಡರ ಮಂಜೂರು ವ ನಾಮಂಜೂರ ಮಾಡುವ ಅಧಿಕಾರವನ್ನು ಪಟ್ಟಣ ಪಂಚಾಯತ ಕಾಯ್ದಿರಿಸಿಕೊಂಡಿದೆ.

**ಸಹಿ/- ಶ್ರೀ ಸಿದ್ದರಾಯ ಕಟ್ಟಿಮನಿ**
**ಮುಖ್ಯಾಧಿಕಾರಿ**
**ಪಟ್ಟಣ ಪಂಚಾಯತ ಶಿರಹಟ್ಟಿ**

**ಸಹಿ/- ಶ್ರೀ ಅನೀಲ ಬಡಿಗೇರ**
**ಆಡಳಿತಾಧಿಕಾರಿಗಳು**
**ಪಟ್ಟಣ ಪಂಚಾಯತ ಶಿರಹಟ್ಟಿ**

ವಾಸಾಸಂಇ/ಗದಗ/ಕೆಎಸ್ಎಂಸಿಎ/478/2023-24


## ವಿಜ್ಞಾನ ಶಿಕ್ಷಕರಿಗೆ ಪರಿಕರಗಳ ತಯಾರಿಕೆ-ವಿಜ್ಞಾನ ಸಂವಹನ ಕಾರ್ಯಾಗಾರ

# ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಮನೋಭಾವ ಬೆಳೆಸಿ




■ ವಿಜಯಸಾಕ್ಷಿ ಸುದ್ದಿ, ಗದಗ

ಶಿಕ್ಷಕರು ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಮನೋಭಾವ ಬೆಳೆಸಬೇಕು ಎಂದು ಗದಗ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಂ.ಎ. ರಡ್ಡೇರ ಹೇಳಿದರು.

ಅವರು ಶುಕ್ರವಾರ ಗದುಗಿನ ಲಯನ್ಸ್ ಸ್ಕೂಲ್ ಸಭಾಂಗಣದಲ್ಲಿ ಭಾರತ ಸರಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಸಂವಹನ ಪರಿಷತ್ತು, ರಾಷ್ಟ್ರೀಯ ವಿಜ್ಞಾನ ಮತ್ತು ತಂತ್ರಜ್ಞಾನ ಸಂವಹನ ಪರಿಷತ್ತು, ಗದಗ ಜಿಲ್ಲಾ ವಿಜ್ಞಾನ ವಿಷಯ ವೇದಿಕೆ ಹಾಗೂ ಬೆಳಗಾವಿಯ ವಿಕಸನ ಕೇಂದ್ರದ ಸಹಯೋಗದಲ್ಲಿ ವಿಜ್ಞಾನ ಶಿಕ್ಷಕರಿಗೆ ಕಡಿಮೆ ವೆಚ್ಚದ ಶಿಕ್ಷಣ ಪರಿಕರಗಳ ತಯಾರಿಕೆ ಮೂಲಕ ವಿಜ್ಞಾನ ಸಂವಹನ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು.

ವಿಜ್ಞಾನ ಮತ್ತು ಗಣಿತ ವಿಷಯಗಳ ಬಗ್ಗೆ ವಿಷಯ ಶಿಕ್ಷಕರು ವಿದ್ಯಾರ್ಥಿಗಳಿಗೆ ಮನದಟ್ಟಾಗುವಂತೆ ಬೋಧನೆ ಮಾಡಬೇಕು. ವಿದ್ಯಾರ್ಥಿಗಳು ಕಲಿತದ್ದನ್ನು ಅನ್ವಯಿಸುವ ಕಾರ್ಯ ಮಾಡಬೇಕು ಅಂದಾಗ ಸರಿ-ತಪ್ಪು, ಲಾಭ-ಹಾನಿಯ ಬಗ್ಗೆ ಮನವರಿಕೆ ಆಗುತ್ತದೆ. ತಪ್ಪು ಮತ್ತು ಹಾನಿಯನ್ನು ಸರಿಪಡಿಸಲು, ಸರಿಪಡಿಕೊಳ್ಳಲು ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಈರ್ವರೂ ಪ್ರಯತ್ನಿಸಬೇಕೆಂದರು.

ಕಲಿಸುವ ಮತ್ತು ಕಲಿಯುವ ಪ್ರಕ್ರಿಯೆ ನಿತ್ಯ ನಿರಂತರವಾದದ್ದು ಎಂದ ಅವರು, ಕಲಿಕೆಯಲ್ಲಿ ಹಿಂದುಳಿದ ವಿದ್ಯಾರ್ಥಿಗಳನ್ನು ಕಲಿಕೆಯಲ್ಲಿ ಹೆಚ್ಚು ಆಸಕ್ತಿಯುಳ್ಳವರನ್ನಾಗಿ ಮಾಡಲು ಅವಶ್ಯವಿರುವ ಕ್ರಮಗಳನ್ನು ಶಿಕ್ಷಕರು ಕೈಗೊಳ್ಳಬೇಕು. ಡೈಟ್ ಕಲಿಸುವ ಮತ್ತು ಕಲಿಯುವ ಕೆಲಸ ಮಾಡುತ್ತಿದೆ. ಈ ಕಾರ್ಯಾಗಾರದಲ್ಲಿ ಪಾಲ್ಗೊಂಡ ಶಿಕ್ಷಕರು ತಮ್ಮ ವಿದ್ಯಾರ್ಥಿಗಳಿಗೂ ಈ ಪ್ರಯೋಗಗಳನ್ನು ಮಾಡಬೇಕು. ಇಂತಹ ಕಾರ್ಯಾಗಾರ ಗದುಗಿನಲ್ಲಿ ಏರ್ಪಡಿಸಿದ್ದು ಅಭಿನಂದನೀಯ. ಇದು ಶಿಕ್ಷಕರಿಗೆ ಹೆಚ್ಚು ಉಪಯುಕ್ತವಾಗಿದೆ ಎಂದರು.

ವೇದಿಕೆಯ ಮೇಲೆ ಗದಗ ಜಿಲ್ಲಾ ಯೋಜನಾ ಉಪಸಮನ್ವಯ ಅಧಿಕಾರಿ ಎಂ.ಎಚ್. ಕಂಬಳಿ, ಗದಗ ಗ್ರಾಮೀಣ ಬಿಇಓ ವ್ಹಿ.ವ್ಹಿ. ನಡುವಿನಮನಿ, ಶಹರ ಬಿಇಓ ಆರ್.ಎಸ್. ಬುರಡಿ, ಬೆಳಗಾವಿ ವಿಕಸನ ಕೇಂದ್ರದ ಅಧ್ಯಕ್ಷ ಸಂಜಯ ಬಿ.ಮುಗದುಮ್ಮ, ಲಯನ್ಸ್ ಶಿಕ್ಷಣ ಸಂಸ್ಥೆಯ ಆಡಳಿತಾಧಿಕಾರಿ ಜಿ.ಬಿ. ಬೇವಿನಕಟ್ಟಿ ಉಪಸ್ಥಿತರಿದ್ದರು.

ಡೈಟ್ ಉಪನ್ಯಾಸಕ ಜಿ.ಡಿ. ದಾಸರ ಸ್ವಾಗತಿಸಿದರು. ಸಂಪನ್ಮೂಲ ವ್ಯಕ್ತಿ ಪ್ರಾ. ರಾಘವೇಂದ್ರ ಮಿಸಾಳೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಶಿವಾನಂದ ಗಿಡ್ನಂದಿ ನಿರೂಪಿಸಿ ವಂದಿಸಿದರು. ಕಾರ್ಯಾಗಾರದಲ್ಲಿ ಗದಗ ಜಿಲ್ಲೆಯ ವಿಜ್ಞಾನ ಶಿಕ್ಷಕ-ಶಿಕ್ಷಕಿಯರು ಪಾಲ್ಗೊಂಡಿದ್ದರು.

ಡೈಟ್‌ನ ಪ್ರಾಚಾರ್ಯ ಜಿ.ಎಲ್. ಬಾರಾಟಕ್ಕೆ ಮಾತನಾಡಿ, ವಿಜ್ಞಾನ ಶಿಕ್ಷಕರಿಗೆ ಕಡಿಮೆ ವೆಚ್ಚದ ಶಿಕ್ಷಣ ಪರಿಕರಗಳ ತಯಾರಿಕೆ ಮೂಲಕ ವಿಜ್ಞಾನ ಸಂವಹನ ಕಾರ್ಯಾಗಾರ ಏರ್ಪಡಿಸಿದ್ದು ಉಪಯುಕ್ತವಾಗಿದೆ. ನಮ್ಮ ಜಿಲ್ಲೆಯ ವಿದ್ಯಾರ್ಥಿಗಳಿಗೆ ವಿಜ್ಞಾನದ ಹಲವು ಪ್ರಯೋಗಗಳನ್ನು ಮನದಟ್ಟು ಮಾಡಿಕೊಳ್ಳಲು ವಿಜ್ಞಾನ ಶಿಕ್ಷಕರ ಮೂಲಕ ಇದು ಸಾಕಾರವಾಗಲಿದೆ ಎಂದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka